ಕ್ರಾಂತಿಯ ಕಿಡಿ

# ಕಾಯಕ ಯೋಗಿ

ಸಂಪಾದಕರು : ಬಿ.ಕೆ. ಅರುಣಜ್ಯೋತಿ

KAYAKAYOGI - Morning Daily

ಕನ್ನಡ ದಿನಪತ್ರಿಕೆ

| ಮಂಡ್ಯ Mandya | ಸಂಪುಟ - 04 Volume - 04 | ಸಂಚಿಕೆ - 85 Issue - 85 | RNI No.KARKAN/2018/77805 POST NO. KA/SK/MND/999/2019-2021 | ಶುಕ್ರವಾರ Friday | 09-07-2021 | ಪುಟ - 04 Page - 04 | ಬೆಲೆ-ರೂ. 02 Price - 02 | ಸಂಪರ್ಕ 9980605484 | E-mail kayakayoginews@gmail.com |
|---|---|---|---|---|---|---|---|---|---|

askಮೈಸೂರು

ಪರಿಸರ, ಪ್ರವಾಸೋದ್ಯಮ, ಆರೋಗ್ಯ, ವ್ಯವಹಾರ, ಕೃಷಿ, ಶಿಕ್ಷಣ, ಜೀವನ ಶೈಲಿ, ಸಂಸ್ಕೃತಿ, ವನ್ಯಜೀವಿಗಳು, ಸಾಧಕರು, ವ್ಯವಹಾರ ಹಾಗೂ ಉತ್ಪನ್ನಗಳ ಮಾಹಿತಿ, ಸುದ್ದಿ ಮತ್ತು ಜಾಹಿರಾತುಗಳು.

FREE CLASSIFIEDS

Visit: askmysuru.com/news

9742 9742 34 askmysuru

# ಕನ್ನಂಬಾಡಿ ಇನ್ನೂ 100 ವರ್ಷ ಭದ್ರ

## ಸುಮಲತಾಗೆ ಎಚ್‌ಡಿಕೆ ತಿರುಗೇಟು



ಮಂಡ್ಯ : ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿ ಹಾಗೂ ಸಂಸದೆ ಸುಮಲತಾ ನಡುವಿನ ಸಂಘರ್ಷ ಮುಂದುವರೆದಿದ್ದು, ಸದ್ಯಕ್ಕೆ ಮುಗಿಯುವ ಲಕ್ಷಣಗಳು ಕಾಣುತ್ತಿಲ್ಲ. ಅಂಬರೀಶ್ ಮೃತಪಟ್ಟ ಸಂದರ್ಭದಲ್ಲಿ ನಾನು ಸಿಎಂ ಆಗಿಲ್ಲದಿದ್ದರೆ ಏನಾಗುತ್ತಿತ್ತು ಎಂಬುದು ಎಲ್ಲರಿಗೂ ಗೊತ್ತಿದೆ. ಅಂದು ಅಂಬರೀಶ್ ಪಾರ್ಥಿವ ಶರೀರ ಮಂಡ್ಯಕ್ಕೆ ತೆಗೆದುಕೊಂಡು ಹೋಗುವುದೇ ಬೇಡ ಎಂದು ಹೇಳಿದ್ದರು. ಆದರೆ ನಾನೇ ಅಂಬರೀಶ್ ಅವರ ಹುಟ್ಟೂರಿಗೆ ತೆಗೆದುಕೊಂಡು ಹೋಗಬೇಕಾಗುತ್ತೆ ಎಂದು ಹೇಳಿ ಹೆಲಿಕಾಪ್ಟರ್ ವ್ಯವಸ್ಥೆಯನ್ನು ಮಾಡಿಸಿದ್ದೆ. ಈಗ ಹೊಸ ರೀತಿಯ ನಾಟಕವಾಡುತ್ತಿದ್ದಾರೆ ಎಂದು ಕಿಡಿಕಾರಿದ್ದಾರೆ.

ಮಂಡ್ಯ ಜಿಲ್ಲೆ ಮದ್ದೂರು ತಾಲೂಕಿನ ಕೆ.ಎಂ.ದೊಡ್ಡಿಯಲ್ಲಿ ಸುದ್ದಿಗೋಷ್ಠಿ ನಡೆಸಿದ ಕುಮಾರಸ್ವಾಮಿ, ಈಗ ವಿಷ್ಣುವರ್ಧನ್ ಸ್ಮಾರಕ ವಿಚಾರ ಏನಾಯಿತು. ಈವರೆಗೂ ಸ್ಮಾರಕ ನಿರ್ಮಾಣ ಮಾಡಲು ಬಿಜೆಪಿ ಸರ್ಕಾರಕ್ಕೆ ಸಾಧ್ಯವಾಗಿಲ್ಲ. ಸರ್ಕಾರದವರು ಈವರೆಗೆ ಏನಾದರೂ ಮಾಡಿದರಾ? ಅಂಬರೀಶ್ ಸತ್ತಾಗ ನಾನಿಲ್ಲದಿದ್ದರೆ ಅಂದು ಏನಾಗುತ್ತಿತ್ತು ಗೊತ್ತು. ಸುಮಲತಾ ವಿಶೇಷ ಮಹಿಳೆ. ಹಾಗಾಗಿ ಅವರಂತಹ ವಿಶೇಷ ಮಹಿಳೆ ಬಗ್ಗೆ ಮಾತನಾಡುವುದು ಬೇಡ ಎಂದು ವ್ಯಂಗ್ಯವಾಡಿದರು.

ನಾನು ಸಿಎಂ ಆಗಿದ್ದಾಗ ಅಕ್ರಮ ಗಣಿಗಾರಿಕೆಯನ್ನು ಬಂದ್ ಮಾಡಿಸಿದ್ದೇ ನಾನು. ನಿಷೇಧಾಜ್ಞೆಯನ್ನು ಜಾರಿ ಮಾಡಿ ಕ್ರಮ ಕೈಗೊಂಡಿದ್ದೆ. ಈಗ ಕಳೆದ ನಾಲ್ಕು ತಿಂಗಳಿಂದ ಅಕ್ರಮ ಗಣಿಗಾರಿಕೆ ನಡೆಯುತ್ತಿಲ್ಲ ಎಂದು ಸಚಿವರೇ ಸ್ಪಷ್ಟಪಡಿಸಿದ್ದಾರೆ. ಮೈಸೂರು ಸಂಸದರೂ ಈ ಬಗ್ಗೆ ಸುದೀರ್ಘ ಹೇಳಿಕೆ ಕೊಟ್ಟಿದ್ದಾರೆ. ಆದರೂ ಕೂಡ ಇವರು ಪರಿಶೀಲನೆಗೆಂದು ಹೋಗಿದ್ದಾದರೂ ಯಾಕೆ ಎಂದು ಪ್ರಶ್ನಿಸಿದರು.

ಇನ್ನು ಕೆ.ಆರ್.ಎಸ್. ಬಿರುಕು ವಿಚಾರವಾಗಿ ಇನ್ನೂ 100 ವರ್ಷವಾದರೂ ಕೆ.ಆರ್.ಎಸ್. ಡ್ಯಾಂಗೆ ಏನೂ ಆಗಲ್ಲ. ವಿಶೇಶ್ವರಯ್ಯನವರು ಕಟ್ಟಿರುವ ಡ್ಯಾಂ ಸುರಕ್ಷಿತವಾಗಿದೆ ಎಂದು ಹೇಳಿದರು.

# ಮಂಡ್ಯ ಜಿಲ್ಲೆಯಲ್ಲಿ ಗಣಿ ದಂಧೆ

## ಶಾಸಕರೋ-ಭಯೋತ್ಪಾದಕರೋ : ಸುಮಲತಾ ಕಿಡಿ



ಮಂಡ್ಯ : 'ಜಿಲ್ಲೆಯಲ್ಲಿ ನಡೆಯುತ್ತಿರುವ ಅಕ್ರಮ ಗಣಿಗಾರಿಕೆಯಿಂದ ಕೆಆರ್‌ಎಸ್ ಜಲಾಶಯಕ್ಕೆ ಧಕ್ಕೆಯುಂಟಾಗುತ್ತಿದೆ. ಇದನ್ನು ಪ್ರಶ್ನೆ ಮಾಡಿದರೆ ಮಾಜಿ ಮುಖ್ಯಮಂತ್ರಿ ಸೇರಿ ಜಿಲ್ಲೆಯ ಹಲವು ಶಾಸಕರು ಹಲವು ರೀತಿಯಲ್ಲಿ ಬೆದರಿಕೆಯೊಡ್ಡುತ್ತಿದ್ದಾರೆ. ಇವರು ಶಾಸಕರೋ ಅಥವಾ ಭಯೋತ್ಪಾದಕರೋ' ಎಂದು ಸಂಸದೆ ಸುಮಲತಾ ಬುಧವಾರ ಪ್ರಶ್ನಿಸಿದರು.

ಶ್ರೀರಂಗಪಟ್ಟಣ, ಪಾಂಡವಪುರ ತಾಲ್ಲೂಕಿನ ವಿವಿಧ ಕಲ್ಲು ಗಣಿ ಚಟುವಟಿಕೆ ಪ್ರದೇಶಗಳಿಗೆ ಭೇಟಿ ನೀಡಿ ನಂತರ ಸುದ್ದಿಗಾರರ ಜೊತೆ ಮಾತನಾಡಿದರು.

'ನಮ್ಮ ಬಳಿ ಸಿಡಿ ಬಾಂಡ್ ಇದೆ, ಮಿಸೈಲ್ ಇದೆ ಎಂದೆಲ್ಲಾ ಬೆದರಿಕೆ ಹಾಕುತ್ತಿದ್ದಾರೆ. ಇದು ಜನಪ್ರತಿನಿಧಿಗಳೂ ಆಡುವ ಮಾತುಗಳಾ, ಮುಖ್ಯಮಂತ್ರಿ ಮಗ, 8 ಮಂದಿ ಜೆಡಿಎಸ್ ಎಂಎಲ್‌ಎಗಳ ವಿರುದ್ಧ ಹೋರಾಡಿ ನಾನು ಗೆಲುವು ಪಡೆದಿದ್ದೇನೆ. ಇವರಿಗೆ ಸೋತ ಮೇಲೂ ಬುದ್ಧಿ ಬಂದಿಲ್ಲ. ಶಾಸಕರ ಬೆದರಿಕೆಗಳಿಗೆ ನಾನು ಬೆದರುವುದಿಲ್ಲ' ಎಂದರು.

'ನನ್ನ ನಡೆ ನನಗೆ ಗೊತ್ತಿದೆ, ಕಲ್ಲು ಗಣಿ ಅಕ್ರಮದ ಬಗ್ಗೆ ಮಾತನಾಡಿದರೆ ನಿಮಗೆ ಯಾಕೆ ಅಷ್ಟೊಂದು ಭಯ. ಜೆಡಿಎಸ್ ನಾಯಕರನ್ನು ಕಂಡರೆ ಪಾಪ ಅನ್ನಿಸುತ್ತದೆ. ಅಂಬರೀಶ್ ಅವರ ಮುಂದೆ ಇವರೆಲ್ಲರೂ ಕೈಕಟ್ಟಿ ನಿಂತಿದ್ದನ್ನು ಕಂಡಿದ್ದೇನೆ, ನಿಮ್ಮಿಂದ ನಾನು ಪಾಠ ಕಲಿಯಬೇಕಾಗಿಲ್ಲ. ಗಣಿ ಪ್ರದೇಶಕ್ಕೆ ಭೇಟಿ ನೀಡುವುದು ದಿಢೀರ್ ನಿಗದಿಯಾಗಿಲ್ಲ, ಕಳೆದ ವಾರ ಅಧಿಕಾರಿಗಳ ಸಭೆಯಲ್ಲೇ ತಿಳಿಸಿದ್ದೆ. ನಾನು ಮಂಡ್ಯ ಸಂಸದೆ, ಗಣಿ ಪ್ರದೇಶಕ್ಕಾದರೂ ಹೋಗುತ್ತೇನೆ, ಕೆಆರ್‌ಎಸ್‌ಗಾದರೂ ಹೋಗುತ್ತೇನೆ, ನಿಮಗ್ಯಾಕೆ ಭಯ' ಎಂದು ಪ್ರಶ್ನಿಸಿದರು.

'ಮಾಜಿ ಮುಖ್ಯಮಂತ್ರಿಯಾಗಿ ಸಂಸದೆ ಬಗ್ಗೆ ಆಡುವ ಮಾತು ನಿಮ್ಮ ಸಂಸ್ಕಾರ ತೋರಿಸುತ್ತದೆ. ನಿಮ್ಮ ಮಾತುಗಳಿಂದಲೇ ಕಳೆದ ಲೋಕಸಭಾ ಚುನಾವಣೆಯಲ್ಲಿ ಸೋತಿದ್ದೀರಿ. ಇವತ್ತಿಗೆ ನೀವು ಚನ್ನಪಟ್ಟಣ ಶಾಸಕ ಅಷ್ಟೇ, ನಾನು ಮಂಡ್ಯ ಸಂಸದೆ. ನನ್ನ ಕೆಲಸಗಳನ್ನು ತಡೆಯಲು ಬರಬೇಡಿ, ಸಿನಿಮಾದವರ ಬಗ್ಗೆ ಕೆಟ್ಟದಾಗಿ ಮಾತನಾಡಿದರೆ ಸುಮ್ಮನಿರುವುದಿಲ್ಲ. ನೀವಾಡುವ ನಾಟಕ, ಅಭಿನಯ ಮೀರಿದ ಇನ್ನೊಂದು ನಾಟಕವಿಲ್ಲ' ಎಂದು ವಾಗ್ದಾಳಿ ನಡೆಸಿದರು.

'ಡಿ.ಕೆ.ಶಿವಕುಮಾರ್ ಅವರು ಜಲಸಂಪನ್ಮೂಲ ಸಚಿವರಾಗಿದ್ದಾಗ 76 ಕೋಟಿ ವೆಚ್ಚದಲ್ಲಿ ಕೆಆರ್‌ಎಸ್ ಜಲಾಶಯ ದುರಸ್ತಿ ಮಾಡಲಾಗಿದೆ. ಜಲಾಶಯ ಬಿರುಕು ಬಿಟ್ಟಿದ್ದಕ್ಕೇ ಅಷ್ಟೊಂದು ಹಣ ವೆಚ್ಚ ಮಾಡಲಾಗಿದೆ. ಕಾವೇರಿ ನೀರಾವರಿ ನಿಗಮದ ಅಧಿಕಾರಿಗಳೇ ನನಗೆ ಮಾಹಿತಿ ನೀಡಿದ್ದಾರೆ. ಜಲಾಶಯದ ಆಸುಪಾಸಿನಲ್ಲಿ ನಡೆಯುತ್ತಿರುವ ಅಕ್ರಮ ಕಲ್ಲುಗಣಿ ಗಾರಿಕೆಯಿಂದ ಕೆಆರ್‌ಎಸ್‌ಗೆ ತೊಂದರೆಯಾಗುತ್ತಿದೆ. ಕಲ್ಲು ಗಣಿಗಳ ವಿರುದ್ಧ ನಿರಂತರವಾಗಿ ಹೋರಾಟ ನಡೆಸುತ್ತೇನೆ' ಎಂದರು.

'ಗಣಿಗಾರಿಕೆ ನಿಷೇಧಿಸಿದ್ದರೂ ರಾತ್ರಿವೇಳೆ ಕದ್ದು ಮುಚ್ಚಿ ಗಣಿಗಾರಿಕೆ ನಡೆಸುತ್ತಿದ್ದಾರೆ. ಗಣಿ ಸ್ಫೋಟದಿಂದ ಸ್ಥಳೀಯರಿಗೆ ತೊಂದರೆಯಾಗಿದೆ, ಪರಿಸರಕ್ಕೆ ಹಾನಿಯಾಗುತ್ತಿದೆ, ಕೃಷಿ ಭೂಮಿ ಹಾಳಾಗುತ್ತಿದೆ. ನಿತ್ಯವೂ ನನಗೆ ಜನರು ದೂರು ಹೇಳುತ್ತಿದ್ದಾರೆ. ಗಣಿಗಾರಿಕೆ ವಿರುದ್ಧ ಶಾಸಕರು ಹೋರಾಟ ನಡೆಸಬೇಕಾಗಿತ್ತು, ಅವರು ಮಾಡದ ಕೆಲಸವನ್ನು ನಾನು ಮಾಡುತ್ತಿದ್ದೇನೆ' ಎಂದರು.

**ಸುಮಲತಾ ಬಂಧನಕ್ಕೆ ಒತ್ತಾಯ**

ಕೆಆರ್‌ಎಸ್ ಜಲಾಶಯ ಬಿರುಕು ಬಿಟ್ಟಿದೆ ಎಂದು ಹೇಳಿ ರೈತರನ್ನು ಆತಂಕ ಮೂಡಿಸುತ್ತಿರುವ ಸಂಸದೆ ಸುಮಲತಾ ಅವರನ್ನು ಬಂಧಿಸಬೇಕು ಎಂದು ಒತ್ತಾಯಿಸಿ ಜೆಡಿಎಸ್ ಕಾರ್ಯಕರ್ತರು ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ಕನ್ನಂಬಾಡಿ ಈ ದೇಶದ ಆಸ್ತಿಯಾಗಿದೆ, ಮಾನಸಿಕ ಅಸ್ವಸ್ಥರಾಗಿರುವ ಸಂಸದರು ಇಲ್ಲಸಲ್ಲದ ಅಪಪ್ರಚಾರ ಮಾಡುತ್ತಿದ್ದಾರೆ. ಕೆಆರ್‌ಎಸ್ ಜಲಾಶಯವನ್ನು ನಂಬಿ ರೈತರು ಜೀವನ ನಡೆಸುತ್ತಿದ್ದಾರೆ. ರಾಜ್ಯ ಸರ್ಕಾರ ಕೂಡಲೇ ಅವರನ್ನು ಬಂಧಿಸಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

## ಸುಮಲತಾ ಭೇಟಿಗೆ ಅಡ್ಡಿ

### ಮಣ್ಣು ಹಾಕಿ ರಸ್ತೆ ಮುಚ್ಚಿರುವ ದುಷ್ಕರ್ಮಿಗಳು

ಮಂಡ್ಯ : ಅಕ್ರಮ ಗಣಿಗಾರಿಕೆ ಪರಿಶೀಲನೆ ಮಾಡಲು ಮಂಡ್ಯ ಸಂಸದೆ ಪರಿಶೀಲನೆ ಮಾಡಲು ಹೋದ ಸಂದರ್ಭದಲ್ಲಿ ದುಷ್ಕರ್ಮಿಗಳು ರಸ್ತೆಗೆ ಮಣ್ಣು ಹಾಕಿ ಅವರು ಬರದಂತೆ ತಡೆಯುವ ಪ್ರಯತ್ನ ಮಾಡಿದ್ದಾರೆ.

ಮಂಡ್ಯದ ಚೆನ್ನನಕೆರೆ ಸಮೀಪ ಅಕ್ರಮ ಗಣಿಗಾರಿಕೆ ಪ್ರದೇಶಕ್ಕೆ ಅವರು ಭೇಟಿ ಕೊಟ್ಟು ಪರಿಶೀಲನೆ ನಡೆಸಿದ್ದಾರೆ.ಈ ಹಿಂದೆ ಅವರು ಅಕ್ರಮ ಗಣಿಗಾರಿಕೆ ಎಲ್ಲಿ ನಡೆಯುತ್ತದೆಯೊ ಆ ಜಾಗಕ್ಕೆ ಖುದ್ದು ನಾನೇ ಹೋಗಿ ಪರಿಶೀಲಿಸಿ ಬರುತ್ತೇನೆ.ಯಾವ ರೀತಿಯಲ್ಲಿ ಅಕ್ರಮ ಎಸಗುತ್ತಿದ್ದಾರೆ. ಅದರಿಂದ ಸರ್ಕಾರದ ಬೊಕ್ಕಸಕ್ಕೆ ಎಷ್ಟು ನಷ್ಟವಾಗುತ್ತದೆ ಅದನ್ನು ಬೆಳಕಿಗೆ ತರುತ್ತೇನೆ ಎಂದಿದ್ದರು.

ಅದರಂತೆ ಅವರು ಇಂದು ಚೆನ್ನನಕೆರೆ ಗಣಿಗಾರಿಕೆ ಪ್ರದೇಶಕ್ಕೆ ಹೋಗಿದ್ದಾರೆ. ಆದರೆ ಅವರು ಹೋಗದಂತೆ ಅವರಿಗೆ ತೊಂದರೆ ತೊಡಕುಗಳು ಎದುರಾದವು. ದುಷ್ಕರ್ಮಿಗಳು ರಸ್ತೆಗೆ ಅಡ್ಡಲಾಗಿ ಮಣ್ಣನ್ನು ಹಾಕಿ ತಡೆದಿದ್ದಾರೆ. ಆದರೆ ಅದನ್ನೆಲ್ಲ ಎದುರಿಸಿ ಅವರು ಚೆನ್ನನಕೆರೆ ಗಣಿಗಾರಿಕೆ ಪ್ರದೇಶಕ್ಕೆ ಹೋಗಿ ಮಾಹಿತಿಯನ್ನು ಪಡೆದುಕೊಂಡಿದ್ದಾರೆ.

# ಸಂಸದೆ ಸುಮಲತಾ ಅಂಬರೀಶ್ ನಟೋರಿಯಸ್

## ಶಾಸಕ ರವೀಂದ್ರ ಶ್ರೀಕಂಠಯ್ಯ ವಾಗ್ದಾಳಿ




ಶ್ರೀರಂಗಪಟ್ಟಣ : ಸಂಸದೆ ಸುಮಲತಾ ಅಂಬರೀಶ್ ನಟೋರಿಯಸ್ ಇದ್ದ ಹಾಗೆ, ಯಾವಾಗ ಹೇಗೆ ಬೇಕಾದರು ಬದಲಾಯಿಸಿಕೊಳ್ಳುವ ಮಹಾನ್ ನಟಿ ಎಂದು ಶಾಸಕ ರವೀಂದ್ರ ಶ್ರೀಕಂಠಯ್ಯ ಸಂಸದರ ವಿರುದ್ಧ ವಾಗ್ದಾಳಿ ನಡೆಸಿದರು.

ತಾಲ್ಲೂಕಿನ ಕೆಆರ್.ಎಸ್ ಕನ್ನಂಬಾಡಿ ಅಣೆಕಟ್ಟೆಗೆ ಭೇಟಿ ನೀಡಿ ಅಣೆಕಟ್ಟೆಯಲ್ಲಿನ ಬಿರುಕುಗಳನ್ನು ಪರಿಶೀಲಿಸಿ ಮಾತನಾಡಿದ ಅವರು, ನಾನು ನಮ್ಮ ಪಕ್ಷದ ಪ್ರಜ್ವಲ್ ರೇವಣ್ಣ ಹಾಗೂ ನಿಖಿಲ್ ಕುಮಾರಸ್ವಾಮಿ ಅವರನ್ನು ಮಿಶೆಲ್‌ಗಳಿದ್ದ ಹಾಗೆ, ಆ ಮಿಶೆಲ್‌ಗಳನ್ನು ಯಾವಾಗಬೇಕಾದರೂ ಪ್ರಯೋಗಿಸುತ್ತೇವೆಂಬ ಹೇಳಿಕೆಯನ್ನು ತಿರುಚುವ ಮೂಲಕ ಸಂಸದರು ಮಹಾನ್ ನಟಿ ಎಂಬುದನ್ನು ಮತ್ತೊಮ್ಮೆ ಸಾಬೀತು ಪಡಿಸಿದ್ದಾರೆ.

ಅಣೆಕಟ್ಟೆಯಲ್ಲಿನ ಗೌಪ್ಯತೆಯನ್ನರಿಯದ ಸಂಸದರು ತಮ್ಮ ಎರಡು ವರ್ಷಗಳ ಕಳಪೆ ಸಾಧನೆಯನ್ನು ಮರೆ ಮಾಚುವ ಸಲುವಾಗಿ ಕನ್ನಂಬಾಡಿ ಅಣೆಕಟ್ಟೆ ಬಿರುಕು ಬಿಟ್ಟಿದೆ, ಹೊಡೆದು ಹೋಗುತ್ತಿದೆ ಎಂದು ಹೇಳಿಕೆ ನೀಡಿ ದೇಶದ್ರೋಹದ ಕೆಲಸ ಮಾಡುತ್ತಿದ್ದಾರೆ. ಅಣೆಕಟ್ಟೆ ಸುರಕ್ಷತೆ ಬಗ್ಗೆ ಮಾತನಾಡಲು ಸಂಸದರು ಪ್ರಧಾನ ಮಂತ್ರಿಗಳಾ ಇಲ್ಲಾ ಮುಖ್ಯಮಂತ್ರಿಗಳಾ ಎಂದು ರವೀಂದ್ರ ಕಿಡಿಕಾರಿದರು.

ಇದುವರೆವಿಗೂ ಅಣೆಕಟ್ಟೆಯನ್ನು ವೀಕ್ಷಣೆ ಮಾಡದ ನೀವು, 30 ಕಿಮೀ ಆಚೆಗಿನ ಗಣಿ ಪ್ರದೇಶಗಳಿಗೆ ಭೇಟಿ ನೀಡುವ ಉದ್ದೇಶವಾದರೂ ಏನು. ಯಾರನ್ನು ಬೆದರಿಸಲು ನೀವು ಗಣಿಗಾರಿಕೆ ಪ್ರದೇಶಗಳಿಗೆ ಭೇಟಿ ನೀಡುತ್ತಿದ್ದೀರಿ ಎಂದು ಕಿಡಿಕಾರಿದ ರವೀಂದ್ರ ಶ್ರೀಕಂಠಯ್ಯ, ಜಿಲ್ಲೆಗೆ ಸಂಬಂಧವೇ ಇಲ್ಲದವರಿಂದ ಜಿಲ್ಲಾಧಿಕಾರಿಗಳು ಹಾಗೂ ಗಣಿ ಅಧಿಕಾರಿಗಳನ್ನು ಪ್ರಶ್ನಿಸುವ ಹಾಗೂ ಬೆದರಿಸುವ ಅಧಿಕಾರವನ್ನು ನಿಮಗೆ ಯಾರು ಕೊಟ್ಟಿದ್ದಾರೆಂದು ರವೀಂದ್ರ ಶ್ರೀಕಂಠಯ್ಯ ಸಂಸದರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಸುಮಲತಾ ಅವರ ಅಕ್ರಮಗಳ ಬಗ್ಗೆ ನನ್ನ ಬಳಿಯೂ ದಾಖಲೆಗಳಿದ್ದು ಅಗತ್ಯ ಸಂದರ್ಭದಲ್ಲಿ ಬಿಡುಗಡೆಗೊಳಿಸುವುದಾಗಿ ಎಚ್ಚರಿಕೆ ನೀಡಿದ ರವೀಂದ್ರ, ಬೆಂಗಳೂರಿನ ಸ್ಟಾರ್ ಹೋಟೆಲ್‌ನಲ್ಲಿ ತಮ್ಮ ಎಡ-ಬಲದಲ್ಲಿರುವ ಬ್ರೋಕರ್‌ಗಳನ್ನು ಯಾವ ವ್ಯವಹಾರ ಕುದುರಿಸಲು ಕಳುಹಿಸಿದ್ದೀರಿ ಸ್ವಲ್ಪ ನೆನಪಿಸಿಕೊಳ್ಳಿ ಎಂದ ರವೀಂದ್ರ ಶ್ರೀಕಂಠಯ್ಯ, ಹಂಗರಹಳ್ಳಿ ಸೇರಿದಂತೆ ಜಿಲ್ಲೆಯಾದ್ಯಂತ ಅಕ್ರಮ ಗಣಿಗಾರಿಕೆ ನಡೆದಿರುವುದು ತಮ್ಮ ಪತಿ ಅಂಬರೀಶ್ ಸಂಸದರಾಗಿದ್ದ ಅವಧಿಯಲ್ಲಿ. ಎಲ್ಲದಕ್ಕೂ ಅಂಬರೀಶ್ ಹೆಸರೇಳುವ ನೀವು ನೈತಿಕ ಹೊಣೆಹೊತ್ತು ರಾಜೀನಾಮೆ ನೀಡುವಂತೆಯೂ ಆಗ್ರಹಿಸಿದರು.

ಇದಕ್ಕೂ ಮೊದಲು ಅಧಿಕಾರಿಗಳೊಂದಿಗೆ ಕನ್ನಂಬಾಡಿ ಅಣೆಕಟ್ಟೆಯನ್ನು ವೀಕ್ಷಿಸಿದ ರವೀಂದ್ರ ಶ್ರೀಕಂಠಯ್ಯ, ಅಣೆಕಟ್ಟೆಯಲ್ಲಿ ಯಾವುದೇ ಬಿರುಕಿಲ್ಲ. ಅಣೆಕಟ್ಟೆಯು ಸುರಕ್ಷಿತವಾಗಿರುವುದಾಗಿ ಸ್ಪಷ್ಟ ಪಡಿಸಿದರು.

ತಹಸೀಲ್ದಾರ್ ಎಂ.ವಿ.ರೂಪ, ನೀರಾವರಿ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಉದರ ದರ್ಶಕ ಚಿಕಿತ್ಸಾ ಶಿಬಿರ

ಮಂಡ್ಯ : ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವತಿಯಿಂದ ಜುಲೈ 2021ರ ಮಾಹೆಯಲ್ಲಿ ನಡೆಯುವ ಉದರ ಶಸ್ತ್ರಚಿಕಿತ್ಸಾ ಶಿಬಿರವನ್ನು, ಜುಲೈ 13 ರಂದು ಅರಕೆರೆ ಸರ್ಕಾರಿ ಆರೋಗ್ಯ ಕೇಂದ್ರದಲ್ಲಿ, 14 ರಂದು ತಗ್ಗಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರ, 15 ರಂದು ಕೆರೆಗೋಡು ಪ್ರಾಥಮಿಕ ಆರೋಗ್ಯ ಕೇಂದ್ರ , 16 ರಂದು ಕಿರುಗಾವಲು ಸರ್ಕಾರಿ ಆರೋಗ್ಯ ಕೇಂದ್ರ, 17 ರಂದು ಶಿವಳ್ಳಿ ಸರ್ಕಾರಿ ಆರೋಗ್ಯ ಕೇಂದ್ರ, 19 ರಂದು ಕೆ.ಎಂ ದೊಡ್ಡಿ ಸರ್ಕಾರಿ ಆರೋಗ್ಯ ಕೇಂದ್ರ, 20 ರಂದು ಕೀಲಾರ ಸರ್ಕಾರಿ ಆರೋಗ್ಯ ಕೇಂದ್ರ, 23 ರಂದು ಕ್ಯಾತುಂಗೆರೆ ಪ್ರಾಥಮಿಕ ಆರೋಗ್ಯ ಕೇಂದ್ರ, ಈ ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ಬೆಳಿಗ್ಗೆ 10 ಗಂಟೆಗೆ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಕ್ಕಳೊಂದಿಗೆ ಕೆರೆಗೆ ಬಿದ್ದು ಗೃಹಿಣಿ ಆತ್ಮಹತ್ಯೆ



ನಾಗಮಂಗಲ: ಇಬ್ಬರು ಮಕ್ಕಳೊಂದಿಗೆ ಗೃಹಿಣಿ ಕೆರೆಗೆ ಬಿದ್ದು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ತಾಲೂಕಿನ ಹುಳ್ಳೇನಹಳ್ಳಿ ಗ್ರಾಮದಲ್ಲಿ ಬುಧವಾರ ಸಂಜೆ ನಡೆದಿದೆ.

ಮಂಡ್ಯ ತಾಲೂಕು ಕೆರಗೋಡು ಹೋಬಳಿ ಮೋಳೆ ಗ್ರಾಮದ ಗ್ರಾಮದ ಗಿರೀಶ್ ಅವರ ಪತ್ನಿ ಸಿಂಚನ(32) ಹಾಗೂ ಮಹೇಂದ್ರ(6), ಡಿಂಪನಾ(4) ಮೃತ ದುರ್ದೈವಿಗಳು.

ಮಂಡ್ಯ ತಾಲೂಕು ಬಿ. ಗೌಡಗೆರೆ ಬೋರಯ್ಯ- ತಾಯಮ್ಮ ಅವರ ಪುತ್ರಿ ಸಿಂಚನ ಅವರನ್ನು ಎಂಟು ವರ್ಷದ ಹಿಂದೆ ಕೆರಗೋಡು ಹೋಬಳಿ ಮೋಳೆ ಗ್ರಾಮದ ಗಿರೀಶ್ ಅವರಿಗೆ ವಿವಾಹ ಮಾಡಿಕೊಡಲಾಗಿತ್ತು. ದಂಪತಿಗಳಿಗೆ ಇಬ್ಬರು ಮಕ್ಕಳಿದ್ದು, ಇತ್ತೀಚೆಗೆ ಗಿರೀಶ್ ಹಾಗೂ ಸಿಂಚನ ನಡುವೆ ಆಗಾಗ್ಗೆ ಸಣ್ಣಪುಟ್ಟ ವಿಚಾರಕ್ಕೆ ಗಲಾಟೆ ನಡೆಯುತ್ತಿದ್ದವು ಎನ್ನಲಾಗಿದೆ.

ಇದರಿಂದ ಮನನೊಂದು ನಾಗಮಂಗಲ ತಾಲೂಕಿನ ಹುಳ್ಳೇನಹಳ್ಳಿ ಗ್ರಾಮದಲ್ಲಿರುವ ತನ್ನ ತಾತನ ಮನೆಗೆ ಸಿಂಚನ ಇಬ್ಬರು ಮಕ್ಕಳೊಂದಿಗೆ ಇಂದು ಬೆಳಿಗ್ಗೆ ಬಂದಿದ್ದರು.

ಸಂಜೆ ವೇಳೆಗೆ ತನ್ನ ಇಬ್ಬರು ಮಕ್ಕಳನ್ನು ಕೆರೆಗೆ ತಳ್ಳಿ, ತಾನು ನೀರಿಗೆ ಜಿಗಿದು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಸಾರ್ವಜನಿಕರು ನೋಡಿ ರಕ್ಷಿಸಲು ಮುಂದಾದರೂ ಸಹ ಆ ವೇಳೆಗೆ ಮೂವರು ಮೃತಪಟ್ಟಿದ್ದಾರೆ.

ಸ್ಥಳಕ್ಕೆ ನಾಗಮಂಗಲ ಗ್ರಾಮಾಂತರ ಪೊಲೀಸರು ಭೇಟಿ ನೀಡಿದ್ದು ಮೃತ ದೇಹಗಳನ್ನು ಕೆರೆಯಿಂದ ಹೊರ ತೆಗೆದಿರುತ್ತಾರೆ. ಈ ಸಂಬಂಧ ಪ್ರಕರಣ ದಾಖಲಾಗಿರುವುದಿಲ್ಲ.

## ವಿದ್ಯುತ್ ಅಭಿವೃದ್ಧಿ ಕಾಮಗಾರಿಗೆ ಚಾಲನೆ



ಪಾಂಡವಪುರ : ತಾಲೂಕಿನ ಕನಗನಮರಡಿ ಗ್ರಾಮದಲ್ಲಿ ಸೆಸ್ಕ್ ಇಲಾಖೆ ವತಿಯಿಂದ ಬೆಳಕು ಯೋಜನೆಯಡಿ ವಿದ್ಯುತ್ ಅಭಿವೃದ್ಧಿ ಕಾಮಗಾರಿಗೆ ಶಾಸಕ ಸಿ.ಎಸ್.ಪುಟ್ಟರಾಜು ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು.

ಮಾಜಿ ಸಿಎಂ ಎಚ್.ಡಿ.ಕುಮಾರಸ್ವಾಮಿ ಅವರ ಸಮ್ಮಿಶ್ರ ಸರ್ಕಾರದ ಆಡಳಿತಾವಧಿಯಲ್ಲಿ ತಾವು ಸಣ್ಣ ನೀರಾವರಿ ಸಚಿವರಾಗಿದ್ದ ವೇಳೆ 2 ಕೋಟಿ ರೂ. ವೆಚ್ಚದಲ್ಲಿ ಸೆಸ್ಕ್ ಇಲಾಖೆ ಮಹತ್ತರವಾದ ಬೆಳಕು ಯೋಜನೆಯಡಿ ತಾಲೂಕಿನ 5 ಗ್ರಾಮಗಳನ್ನು ಆಯ್ಕೆ ಮಾಡಿಕೊಂಡು ಗ್ರಾಮದಲ್ಲಿ ವಿದ್ಯುತ್ ಅಡಚಣೆ ರಹಿತ ಗ್ರಾಮವನ್ನಾಗಿ ಮಾಡಬೇಕೆಂಬ ಅಭಿಲಾಷೆ ಹೊಂದಿದ್ದೆ ಎಂದರು.

ಬೆಳಕು ಯೋಜನೆಯಡಿ ತಾಲೂಕಿನ ಕೆನ್ನಾಳು, ಕನಗನಮರಡಿ, ರಾಗಿಮುದ್ದನಹಳ್ಳಿ, ಲಕ್ಷ್ಮೀಸಾಗರ, ಮಾಣಿಕ್ಯನಹಳ್ಳಿ ಗ್ರಾಮಗಳನ್ನು ಆಯ್ಕೆ ಮಾಡಿಕೊಂಡು ಪ್ರತಿ ಗ್ರಾಮಕ್ಕೆ 40 ಲಕ್ಷ ರೂ. ಹಣ ಮಂಜೂರು ಮಾಡಿಸಿದ್ದೆ. ಈ ಕಾಮಗಾರಿಯಡಿಯಲ್ಲಿ ಹೊಸದಾಗಿ ವಿದ್ಯುತ್ ಟ್ರಾನ್ಸ್‌ಫಾರ್ಮರ್ ಅಳವಡಿಸಿ ಶಿಥಿಲಗೊಂಡ ವಿದ್ಯುತ್ ಕಂಬಗಳನ್ನು ಬದಲಾಯಿಸುವ ಹಾಗೂ ವಿದ್ಯುತ್ ಕಂಬವಿಲ್ಲದ ಸ್ಥಳಕ್ಕೆ ವಿದ್ಯುತ್ ಕಂಬ ಹಾಕುವುದು, ವಿದ್ಯುತ್ ವಾಹಕ (ತಂತಿ) ಬದಲಾವಣೆ ಮಾಡಲಾಗುತ್ತದೆ ಎಂದು ತಿಳಿಸಿದರು.

ಮೈಶುಗರ್ ಅಧ್ಯಕ್ಷ ಜೆ.ಶಿವಲಿಂಗೇಗೌಡ, ಗ್ರಾ.ಪಂ ಅಧ್ಯಕ್ಷ ಸಿ.ಬಿ.ತಮ್ಮಣ್ಣ, ಉಪಾಧ್ಯಕ್ಷೆ ಚಂದ್ರಕುಮಾರಿ ಇತರರಿದ್ದರು.

## ಸಚಿವರ ಜಿಲ್ಲಾ ಪ್ರವಾಸ

ಮಂಡ್ಯ : ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಕೆ.ಎಸ್.ಈಶ್ವರಪ್ಪ ಜು.9 ರಂದು ಮಂಡ್ಯ ಜಿಲ್ಲಾ ಪ್ರವಾಸ ಕೈಗೊಂಡಿದ್ದು, ಜಿ.ಪಂ. ಸಭಾಂಗಣದಲ್ಲಿ ಮಧ್ಯಾಹ್ನ 2:30 ರಿಂದ ಸಂಜೆ 5 ಗಂಟೆಯವರೆಗೆ ಮಂಡ್ಯ ಮಹಾತ್ಮಾ ಗಾಂಧಿ ನರೇಗಾ ಯೋಜನೆ, ಜಲಜೀವನ್ ಮಿಷನ್ ಸೇರಿದಂತೆ ಇಲಾಖಾ ಕಾರ್ಯಕ್ರಮಗಳ ಪ್ರಗತಿ ಪರಿಶೀಲನೆ ಬಗ್ಗೆ ಚರ್ಚಿಸಲು ಸಭೆಯನ್ನು ನಡೆಸುವರು ಎಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜು.13 : ಜನ ಸಂಪರ್ಕ ಸಭೆ

ಮಂಡ್ಯ : ಮಂಡ್ಯ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಮಂಡ್ಯ ಉಪ ವಿಭಾಗ, ಕೊತ್ತತ್ತಿ ಉಪ ವಿಭಾಗ ಮತ್ತು ಕೆರಗೋಡು ಉಪ-ವಿಭಾಗದ ವ್ಯಾಪ್ತಿಯ ವಿದ್ಯುತ್ ಸಮಸ್ಯೆಗಳ ಕುರಿತು ಚರ್ಚಿಸಲು, ವಿದ್ಯುತ್ ಗ್ರಾಹಕರ ಕುಂದು ಕೊರತೆ ವಿಚಾರಣೆಯ ಜನ ಸಂಪರ್ಕ ಸಭೆಯನ್ನು ಮಂಡ್ಯ ವೃತ್ತದ ಅಧೀಕ್ಷಕ ಇಂಜಿನಿಯರ್‌ರವರ ಅಧ್ಯಕ್ಷತೆಯಲ್ಲಿ ಜಲೈ 13 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 01 ಗಂಟೆಯವರೆಗೆ ಮಂಡ್ಯ ವಿಭಾಗದ ಆವರಣದಲ್ಲಿ ನಡೆಸಲಾಗುವುದು.

ಮಂಡ್ಯ ತಾಲ್ಲೂಕು ವ್ಯಾಪ್ತಿಯಲ್ಲಿ ಬರುವ ಗ್ರಾಹಕರು ಅಥವಾ ಸಾರ್ವಜನಿಕರು ಈ ಸಭೆಯಲ್ಲಿ ಸರ್ಕಾರ ಹೊರಡಿಸಿರುವ ಕೋವಿಡ್-19 ಮಾರ್ಗಸೂಚಿಯನ್ನು ಪಾಲಿಸುವ ಮೂಲಕ ಭಾಗವಹಿಸಬಹುದೆಂದು ಸೆಸ್ಕ್ ಮಂಡ್ಯ ವಿಭಾಗದ ಕಾರ್ಯ ನಿರ್ವಾಹಕ ಇಂಜಿನಿಯರ್‌ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕ್ರಾಂತಿಯಕಿಡಿ
ಪುಟ-2
ಶುಕ್ರವಾರ
09 ಜುಲೈ 2021
ಕಾಯಕಯೋಗಿ
KAYAKAYOGI-MORNING DAILY ಕನ್ನಡ ದಿನಪತ್ರಿಕೆ



## ಶ್ರೀ ಬೀರಲಿಂಗೇಶ್ವರ ಸ್ವಾಮಿ ಸಮುದಾಯ ಭವನಕ್ಕೆ ಭೂಮಿ ಪೂಜೆ

ಚಾಮರಾಜನಗರ : ತಾಲ್ಲೂಕಿನ ಮುತ್ತಿಗೆ ಗ್ರಾಮದಲ್ಲಿ ಶ್ರೀ ಬೀರಲಿಂಗೇಶ್ವರ ಸ್ವಾಮಿ ಸಮುದಾಯ ಭವನ ನಿರ್ಮಾಣಕ್ಕೆ ವರುಣಾ ಕ್ಷೇತ್ರದ ಶಾಸಕ ಡಾ. ಯತೀಂದ್ರ ಸಿದ್ದರಾಮಯ್ಯ ಅವರು ಭೂಮಿ ಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಗುಂಡ್ಲುಪೇಟೆ ಕ್ಷೇತ್ರದ ಕಾಂಗ್ರೆಸ್ ಯುವ ಮುಖಂಡ ಎಚ್.ಎಂ. ಗಣೇಶ್ ಪ್ರಸಾದ್ , ಮುಖಂಡರಾದ ಆರ್. ಉಮೇಶ್ .ಕೆ. ನವೀನ್ ಸ್ವಾಮಿಗೌಡ, ಬಾಲರಾಜು, ಗ್ರಾಮದ ಯಜಮಾನರು, ಮುಖಂಡರು ಇದ್ದರು.

## ಕೋವಿಡ್‌ನಿಂದ ಮೃತಪಟ್ಟ ರೈತರ ಕೃಷಿ ಸಾಲ ಮನ್ನಾ ಚಿಂತನೆ: ಸಚಿವ ಎಸ್.ಟಿ.ಎಸ್

### ಸಾಲ ಮನ್ನಾ ಮಾಡುವುದು ಶೇ. 100 ರಷ್ಟು ಖಚಿತ

ಬೆಂಗಳೂರು: ಈ ಸಾಲಿನಲ್ಲಿ ಕೋವಿಡ್‌ನಿಂದ ಮೃತಪಟ್ಟ ರೈತರ ಕೃಷಿ ಸಾಲ ಮನ್ನಾ ಮಾಡಲು ರಾಜ್ಯ ಸರ್ಕಾರ ಚಿಂತನೆ ನಡೆಸಿದೆ.



ಸಹಕಾರಿ ಸಾಲ ಪಡೆದಿರುವ ರೈತರಿಗೆ ಮಾತ್ರ ಇದು ಅನ್ವಯವಾಗುತ್ತದೆ. ಎಷ್ಟು ಮೊತ್ತದವರೆಗಿನ ಸಾಲ ಮನ್ನಾ ಮಾಡಬೇಕು ಎಂಬ ಬಗ್ಗೆ ಚರ್ಚೆ ನಡೆದಿದೆ. ಮೊದಲಿಗೆ ಎಷ್ಟು ಜನ ರೈತರು ಮೃತಪಟ್ಟಿದ್ದಾರೆ ಎಂಬುದನ್ನು ಒಂದು ವಾರದಲ್ಲಿ ಮಾಹಿತಿ ಪಡೆಯಲಾಗುವುದು. ಸಾಲ ಮನ್ನಾ ಮಾಡುವುದು ಶೇ. 100 ರಷ್ಟು ಖಚಿತ ಎಂದು ಸಹಕಾರ ಸಚಿವ ಮತ್ತು ಸಚಿವ ಸಂಪುಟ ಉಪ ಸಮಿತಿ ಅಧ್ಯಕ್ಷರಾದ ಎಸ್.ಟಿ.ಸೋಮಶೇಖರ್ ಸುದ್ದಿಗಾರರಿಗೆ ತಿಳಿಸಿದರು.

ಕನಿಷ್ಠ ಬೆಂಬಲ ಬೆಲೆ ಯೋಜನೆ ಅಡಿಯಲ್ಲಿ 4–5 ತಿಂಗಳ ಹಿಂದೆ ಖರೀದಿ ಮಾಡಲಾಗಿದ್ದ ರಾಗಿ, ಭತ್ತ ಹಾಗೂ ಗೋಧಿಗೆ ಬಾಕಿ ಹಣವು ಸುಮಾರು 721 ಕೋಟಿ ರೂ.ನಷ್ಟಿದ್ದು, ಇದನ್ನು ಇನ್ನು 2–3 ದಿನಗಳಲ್ಲಿ ಪಾವತಿಸುವುದಾಗಿಯೂ ಎಸ್.ಟಿ. ಸೋಮಶೇಖರ್ ಅವರು ಹೇಳಿದರು.

## ಸೋಂಕಿತರಿಗೆ ಆರೈಕೆ ಕೇಂದ್ರದಲ್ಲಿ ಪರೀಕ್ಷೆ: ಡಿಸಿ ಆರ್.ಗಿರೀಶ್

ಹಾಸನ: ಜುಲೈ 19 ಹಾಗೂ 22 ರಂದು ನಡೆಯುವ ಎಸ್ಸೆಸ್ಸೆಲ್ಸಿ ಪರೀಕ್ಷೆಯನ್ನು ಯಾವುದೇ ಲೋಪದೋಷವಾಗದಂತೆ ನಡೆಸಲು ಮುನ್ನೆಚ್ಚರಿಕೆ ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿ ಆರ್.ಗಿರೀಶ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.



ಎಸ್ಸೆಸ್ಸೆಲ್ಸಿ ಪರೀಕ್ಷೆ ಸಂಬಂಧ ಗುರುವಾರ ವಿವಿಧ ಇಲಾಖೆ ಅಧಿಕಾರಿಗಳ ಸಭೆ ನಡೆಸಿ ಮಾತನಾಡಿದ ಅವರು, ಪರೀಕ್ಷೆಗೆ ಗ್ರಾಮಾಂತರ ಪ್ರದೇಶಗಳಿಂದ ಬರುವಂತಹ ವಿದ್ಯಾರ್ಥಿಗಳಿಗೆ ತೊಂದರೆ ಆಗದಂತೆ ಬಸ್ ಸಂಚರಿಸಲು ಕ್ರಮವಹಿಸಬೇಕು ಎಂದರು.

ರೋಗ ಲಕ್ಷಣ ಕಂಡು ಬಂದ ಮಕ್ಕಳಿಗೆ ಪ್ರತ್ಯೇಕ ಕೊಠಡಿಯಲ್ಲಿ ಪರೀಕ್ಷೆ ನಡೆಸಿ ಹಾಗೂ ಕೋವಿಡ್ ಪಾಸಿಟಿವ್ ಇರುವ ಮಕ್ಕಳಿಗೆ ಕೋವಿಡ್ ಕೇರ್ ಕೇಂದ್ರಗಳಲ್ಲಿ ಪರೀಕ್ಷೆ ನಡೆಸಲು ವ್ಯವಸ್ಥೆ ಕಲ್ಪಿಸುವಂತೆ ಅಧಿಕಾರಿಗಳಿಗೆ ತಿಳಿಸಿದರು.

ಪರೀಕ್ಷೆ ನಡೆಯುವ ಮುನ್ನ ಹಾಗೂ ಪರೀಕ್ಷೆ ಮುಗಿದ ನಂತರ ಕೊಠಡಿಗಳಿಗೆ ಸ್ಯಾನಿಟೈಸರ್ ಸಿಂಪಡಿಸಿ ಪರೀಕ್ಷಾ ಕೇಂದ್ರಗಳಲ್ಲಿ ಥರ್ಮಲ್ ಸ್ಕ್ಯಾನರ್, ಪಲ್ಸ್ ಆಕ್ಸಿಮೀಟರ್ ಇರುವಂತೆ ಗಮನಹರಿಸಬೇಕು. ಯಾವುದೇ ತೊಂದರೆ

ಉಂಟಾಗದಂತೆ ಪರೀಕ್ಷಾ ಕಾರ್ಯ ಯಶಸ್ವಿಗೊಳಿಸಿ ಎಂದು ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲಾ ಮಟ್ಟದಲ್ಲಿ ಹಾಗೂ ಪ್ರತಿ ತಾಲೂಕಿನಲ್ಲಿ ಎರಡು ಹೆಚ್ಚುವರಿ ಪರೀಕ್ಷೆ ಕೇಂದ್ರ ಸ್ಥಾಪಿಸುವಂತೆ ತಿಳಿಸಿದರಲ್ಲದೇ ಪ್ರತಿ ಪರೀಕ್ಷಾ ಕೇಂದ್ರದಲ್ಲಿ ಆರೋಗ್ಯ ತಪಾಸಣಾ ಕೇಂದ್ರ ತೆರೆಯಬೇಕು. ಪರೀಕ್ಷೆ ಬರೆಯುವ ಕೋವಿಡ್ ಪಾಸಿಟಿವ್ ಹೊಂದಿದ ಮಕ್ಕಳ ವಿವರಗಳನ್ನು ನೀಡುವಂತೆ ಅಧಿಕಾರಿಗಳಿಗೆ ಹೇಳಿದರು.

ಸಭೆಯಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಬಿ.ಎನ್.ನಂದಿನಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಕೆ.ಎಂ. ಸತೀಶ್ ಕುಮಾರ್, ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಚಂದ್ರಶೇಖರ್,

ಸಾರ್ವಜನಿಕ ಶಿಕ್ಷಣ ಇಲಾಖೆ ಉಪ ನಿರ್ದೇಶಕರಾದ ಕೆ.ಎಸ್.ಪ್ರಕಾಶ್, ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಜರಿದ್ದರು.

## ಅಂಬರೀಶ್ ಮುಂದೆ ಮಾಜಿ ಸಿಎಂ ಎಚ್ಡಿಕೆ ಕೈಕಟ್ಟಿ ನಿಂತ ಫೋಟೋ ವೈರಲ್!

ಮಂಡ್ಯ : ಕೆಆರ್‌ಎಸ್ ಡ್ಯಾಂ ಬಿರುಕು ವಿಚಾರವಾಗಿ ಮಾಜಿ ಸಿಎಂ ಎಚ್.ಡಿ. ಕುಮಾರಸ್ವಾಮಿ ಹಾಗೂ ಸುಮಲತಾ ಅಂಬರೀಶ್ ನಡುವಿನ ವಾಕ್ಸಮರ ಮುಂದು ವರಿದಿದ್ದು, ಈ ನಡುವೆ ಅಂಬರೀಶ್ ಎದುರು ಎಚ್.ಡಿ.ಕುಮಾರಸ್ವಾಮಿ ಅವರು ಕೈಕಟ್ಟಿ ನಿಂತಿರುವ ಫೋಟೋ ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ.

'ಮಂಡ್ಯದ ಗಂಡು' ನಟ ಅಂಬರೀಶ್ ಮುಂದೆ ಮಾಜಿ ಸಿಎಂ ಎಚ್.ಡಿ. ಕುಮಾರಸ್ವಾಮಿ ಕೈಕಟ್ಟಿ ನಿಂತ ಫೋಟೋ ಸೋಶಿಯಲ್ ಮೀಡಿಯಾದಲ್ಲಿ ಹರಿದಾಡುತ್ತಿದೆ. ಸಂಸದೆ ಸುಮಲತಾ ಮತ್ತು ಅಂಬರೀಶ್ ಬೆಂಬಲಿಗರು ಪೇಜ್ ಗಳಲ್ಲಿ ವಿವಿಧ ಬರಹಗಳಡಿ ಈ ಫೋಟೋ ಶೇರ್ ಮಾಡಲಾಗಿದೆ.

ಸುಮಲತಾ ಅವರು ಬುಧವಾರ ಮಾತನಾಡುತ್ತಿದ್ದ ಸಂದರ್ಭದಲ್ಲಿ, ಅಂಬರೀಶ್ ಮುಂದೆ ಯಾರೆಲ್ಲಾ ಕೈ ಕಟ್ಟಿ ನಿಲ್ತಿದ್ರು ಎಂದು ತಮಗೆ ಗೊತ್ತಿದೆ. ಅಂಬರೀಶ್ ಎದುರು ಕೈಕಟ್ಟಿ ನಿಲ್ಲುತ್ತಿದ್ದವರೆಲ್ಲಾ ಈಗ ಮಾತನಾಡುತ್ತಿದ್ದಾರೆ ಎಂದು ಹೇಳಿಕೆ ನೀಡಿದ್ದರು. ಈ ಹೇಳಿಕೆ ಬೆನ್ನಲ್ಲೇ ಅಂಬ ರೀಶ್ ಎದುರು ಕುಮಾರಸ್ವಾಮಿ ಕೈಕಟ್ಟಿ ನಿಂತಿರುವ ಫೋಟೋ ವೈರಲ್ ಆಗಿದೆ.

ನಮ್ಮ ಪಕ್ಷ ನಿಮ್ಮಂತಹ ಸಾವಿರಾರೂ ಲೀಡರ್ ಗಳನ್ನು ತಯಾರು ಮಾಡಿದೆ ಅಂತ ಹೇಳುತ್ತಾರೆ. ನೀವು ಸಾವಿರಾರರು ಜನರನ್ನು ತಯಾರು ಮಾಡಿಸಿರಬಹುದು. ಆದ್ರೆ ನಿಮ್ಮ ಈ ರೀತಿಯ ನಡವಳಿಕೆ, ಮಾತುಗಳಿಂದಲೇ ಎಷ್ಟೋ ಒಳ್ಳೆಯ ಜನ ಬೇರೆ ಪಕ್ಷ ಸೇರಿಕೊಂಡಿದ್ದಾರೆ. ನಿಮ್ಮ ಮಾತುಗಳಿಂದಲೇ ಅವರೆಲ್ಲ ನಿಮ್ಮ ಪಕ್ಷ ತೊರೆದಿರೋದು. ನೀವು ತಯಾರು ಮಾಡಿರುವ ಸಾವಿರಾರರು ಜನ, ಅದಕ್ಕಿಂತ ದೊಡ್ಡವರು ಅಂಬರೀಶ್ ಅವರ ಮುಂದೆ ಕೈ ಕಟ್ಟಿ ನಮ್ಮ ಮನೆಯಲ್ಲಿ ನಿಂತಿರೋದನ್ನು ಹಲವು ವರ್ಷ ನೋಡಿದ್ದೇನೆ ಎಂದು ಹೇಳಿದ್ದರು.



# ತೈಲ ಬೆಲೆ ಏರಿಕೆ ಖಂಡಿಸಿ ಕಾಂಗ್ರೆಸ್ ಸೈಕಲ್ ಜಾಥಾ

## ಸೈಕಲ್ ತುಳಿದು ಕೇಂದ್ರ ಹಾಗೂ ರಾಜ್ಯ ಬಿಜೆಪಿ ಸರ್ಕಾರದ ವಿರುದ್ಧ ಘೋಷಣೆ

ಚಾಮರಾಜನಗರ : ಇಂಧನ ಬೆಲೆ ಹಾಗೂ ತೈಲ ಬೆಲೆ ಏರಿಕೆ ಮಾಡಿರುವ ಕೇಂದ್ರ ಸರ್ಕಾರದ ವಿರುದ್ಧ ಜಿಲ್ಲಾ ಕಾಂಗ್ರೆಸ್ ವತಿಯಿಂದ ಪ್ರತಿಭಟನೆ ನಡೆಸಿ ಸೈಕಲ್ ಜಾಥಾ ನಡೆಯಿತು.

ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಿಂದ ಕೆಪಿಸಿಸಿ ಕಾರ್ಯಾಧ್ಯಕ್ಷ ಆರ್.ಧ್ರುವನಾರಾಯಣ, ಮಾಜಿ ಸಚಿವ ಎನ್.ಚೆಲುವರಾಯಸ್ವಾಮಿ, ಶಾಸಕರುಗಳಾದ ಸಿ.ಪುಟ್ಟರಂಗ ಶೆಟ್ಟಿ, ಆರ್.ನರೇಂದ್ರ ನೇತೃತ್ವದಲ್ಲಿ ನೂರಾರು ಮಂದಿ ಕಾರ್ಯಕರ್ತರು ಜಿಲ್ಲಾಡಳಿತ ಭವನದರೆಗೆ ಸೈಕಲ್ ಜಾಥಾ ನಡೆಸಿ ಕೇಂದ್ರ ಹಾಗೂ ರಾಜ್ಯ ಬಿಜೆಪಿ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು.

ಈ ವೇಳೆ ಮಾಜಿ ಸಚಿವ ಚೆಲುವರಾಯಸ್ವಾಮಿ ಮಾತನಾಡಿ, ಜಿಲ್ಲೆಯಲ್ಲಿ ಆಕ್ಸಿಜನ್ ದುರಂತದಲ್ಲಿ 36 ಮಂದಿ ಸತ್ತರೂ ಸರ್ಕಾರ ಖುದ್ದು ಭೇಟಿ ಮಾಡಿ ಸಾಂತ್ವಾನ ಹೇಳಿಲ್ಲ, ಕಾಂಗ್ರೆಸ್ ಹೋರಾಟ ಮಾಡಿದ ಬಳಿಕ ಕೋವಿಡ್‌ನಿಂದ ಮೃತಪಟ್ಟವರಿಗೆ ಪರಿಹಾರ ಕೊಡಲು ಸರ್ಕಾರ ಘೋಷಿಸಿತು ಎಂದರು.

ಕೊರೊನಾದಿಂದ ಆರ್ಥಿಕ ಸಂಕಷ್ಟ, ಬೀದಿಗೆ ಬಿದ್ದ ಜೀವನದ ನಡುವೆ ಬೆಲೆ ಏರಿಕೆಯು ಜನಸಾಮಾನ್ಯನನ್ನು ಹೈರಣಾಗಿಸಿದೆ. ಜನರು ಎಚ್ಚರಗೊಳ್ಳುವ ತನಕ ಈ ಸಮಸ್ಯೆಗಳಿಗೆ ಮುಕ್ತಿ ಇಲ್ಲ ಎಂದರು.

ಕೆಪಿಸಿಸಿ ಕಾರ್ಯಾಧ್ಯಕ್ಷ ಆರ್.ಧ್ರುವನಾರಾಯಣ ಮಾತನಾಡಿ, ಯುಪಿಎ ಸರ್ಕಾರದ ಸಮಯಕ್ಕಿಂತ ಈಗಲೇ ಪ್ರತಿ ಬ್ಯಾರೆಲ್‌ಗೆ ಕಡಿಮೆ ಬೆಲೆ ಇದ್ದರೂ ಹತ್ತಾರು ಪಟ್ಟು ಹೆಚ್ಚು ದುಡ್ಡು ಕೊಟ್ಟು ಇಂಧನ ಖರೀದಿಸಬೇಕಿದೆ ಎಂದು ಕಿಡಿಕಾರಿದರು.

ಪ್ರತಿಭಟನೆಯಲ್ಲಿ ಶಾಸಕರಾದ ಸಿ.ಪುಟ್ಟರಂಗಶೆಟ್ಟಿ, ಆರ್. ನರೇಂದ್ರ, ಮಾಜಿ ಶಾಸಕರಾದ ಎ.ಆರ್.ಕೃಷ್ಣಮೂರ್ತಿ, ಬಾಲರಾಜು, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಮರಿಸ್ವಾಮಿ, ಉಪಾಧ್ಯಕ್ಷ ರವಿಕುಮಾರ್, ಬ್ಲಾಕ್ ಅಧ್ಯಕ್ಷರಾದ ಗುರುಸ್ವಾಮಿ, ಮಹಮದ್ ಅಸ್ಗರ್ ಮುನ್ನಾ, ಸೈಯದ್ ರಫಿ, ಮುಖಂಡರಾದ ಚಿಕ್ಕಮಹದೇವು, ಆರ್.ಮಹದೇವು, ಕಾಗಲವಾಡಿ ಶಿವಸ್ವಾಮಿ ಸೇರಿದಂತೆ ಕಾಂಗ್ರೆಸ್ ಮುಖಂಡರುಗಳು, ಕಾರ್ಯಕರ್ತರು ಇದ್ದರು.




### ನಾನೇನು ಅಂಬರೀಶ್‌ಗೆ ಗುಲಾಮನಾ.? ಫೋಟೋ ವೈರಲ್ ಬಗ್ಗೆ ಎಚ್ಡಿಕೆ ಕಿಡಿ

ಬೆಂಗಳೂರು: ಮಾಜಿ ಸಿಎಂ ಹೆಚ್.ಡಿ. ಕುಮಾರಸ್ವಾಮಿ ಹಾಗೂ ಸಂಸದೆ ಸುಮಲತಾ ನಡುವಿನ ವಾಕ್ಸಮರ ತಾರಕಕ್ಕೇರಿದ್ದು, ನಟ ಅಂಬರೀಶ್ ಮುಂದೆ ಕೈಕಟ್ಟಿ ನಿಲ್ಲಲು ನಾನೇನು ಅಂಬರೀಶ್‌ಗೆ ಸ್ಲೇವ್ ಆಗಿದ್ದೇನಾ? ಎಂದು ಕುಮಾರಸ್ವಾಮಿ ಕಿಡಿಕಾರಿದ್ದಾರೆ.

ಅಂಬರೀಶ್ ಇದ್ದಾಗ ಯಾರ್ಯಾರು ಅವರ ಮುಂದೆ ಕೈಕಟ್ಟಿ ನಿಲ್ಲುತ್ತಿದ್ದರು ಎಂಬುದು ಗೊತ್ತು ಎಂಬ ಸುಮಲತಾ ಹೇಳಿಕೆ ಬೆನ್ನಲ್ಲೇ ಸಾಮಾಜಿಕ ಜಾಲತಾಣಗಳಲ್ಲಿ ಅಂಬರೀಶ್ ಮುಂದೆ ಕುಮಾರಸ್ವಾಮಿ ಕೈಕಟ್ಟಿ ನಿಂತಿರುವ ಫೋಟೋಗಳು ವೈರಲ್ ಆಗಿವೆ. ಈ ಬಗ್ಗೆ ಪ್ರತಿಕ್ರಿಯಿಸಿದ ಕುಮಾರಸ್ವಾಮಿ, ಅಂಬರೀಶ್ ಮುಂದೆ ಕೈಕಟ್ಟಿ ನಿಲ್ಲಲು ನಾವೇನು ಗುಲಾಮರಾ ? ಜನಸಾಮಾನ್ಯರು ಬಂದರೂ ನಾನು ಕೈಕಟ್ಟಿ ನಿಲ್ಲುತ್ತೇನೆ ಎಂದು ಹೇಳಿದ್ದಾರೆ.

ಈ ವಿಚಾರಗಳನ್ನು ವೈಭವೀಕರಿಸುವ ಅಗತ್ಯವಿಲ್ಲ. ಈ ಮೂಲಕ ಅವರಿಗೆ ಸ್ಕೋಪ್ ಕೊಡಬೇಕಾಗಿಯೂ ಇಲ್ಲ. ಹಲವು ವರ್ಷಗಳಿಂದ ಭ್ರಷ್ಟಾಚಾರದ ವಿರುದ್ಧ ಹೋರಾಟ ನಡೆಸುತ್ತಾ ಬಂದವರು ನಾವು. ನಮ್ಮ ಬಗ್ಗೆ ಮಾತಾಡುವ ಯೋಗ್ಯತೆ ಸುಮಲತಾಗಿಲ್ಲ ಎಂದು ಗುಡುಗಿದ್ದಾರೆ.

## 'ರಾಜ್ಯದಲ್ಲಿ ಬಿಜೆಪಿ ಉಳಿಯಬೇಕಾದರೆ ಸಿಎಂ ಬದಲಾವಣೆಯಾಗಲೇಬೇಕು'

ಬೆಂಗಳೂರು : ಬಿಜೆಪಿ ಮತ್ತು ಕರ್ನಾಟಕ ರಾಜ್ಯ ಉಳಿಯಬೇಕಾದರೆ ಮುಖ್ಯಮಂತ್ರಿ ಬದಲಾವಣೆಯಾಗಲೇಬೇಕೆಂದು ಪ್ರವಾಸ್ಯೋದ್ಯಮ ಸಚಿವ ಸಿ.ಪಿ.ಯೋಗಿಶ್ವರ್ ಆಗ್ರಹಿಸಿದ್ದಾರೆ.

ಸಿಎಂ ಬದಲಾವಣೆ ವಿಚಾರದಲ್ಲಿ ಬಿ.ಎಸ್. ಯಡಿಯೂರಪ್ಪ ಮತ್ತು ಬಿ.ವೈ.ವಿಜಯೇಂದ್ರ ವಿರುದ್ಧ ಯೋಗಿಶ್ವರ್ ಮತ್ತೆ ತೀವ್ರ ವಾಗ್ದಾಳಿ ನಡೆಸಿದ್ದಾರೆ. ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಅನಿವಾರ್ಯ. ಕರ್ನಾಟಕ ರಾಜ್ಯ ಮತ್ತು ಬಿಜೆಪಿ ಉಳಿಯಬೇಕಾದರೆ ಮುಖ್ಯಮಂತ್ರಿ ಬದಲಾವಣೆಯಾಗಲೇಬೇಕೆಂದು ಹೇಳಿದ್ದಾರೆ.



ದಸರಾ ಆನೆಗಳು ಚಿನ್ನದ ಅಂಬಾರಿ ಹೊತ್ತು ನಿಗದಿತ ಸ್ಥಳವನ್ನು ತಲುಪುತ್ತವೆ. ಇಲ್ಲಿ ಆನೆಗಳು ಹೊರುವ ಚಿನ್ನದ ಅಂಬಾರಿಯ ತೂಕ ಮುಖ್ಯವಾಗುವುದಿಲ್ಲ. ಅದನ್ನು ಹೊತ್ತು ನಿಗದಿತ ಸ್ಥಳಕ್ಕೆ ತಲುಪುವುದು ಬಹುಮುಖ್ಯ. ಪ್ರತಿವರ್ಷವೂ ಒಂದೇ ಆನೆ ಚಿನ್ನದ ಅಂಬಾರಿಯನ್ನು ಹೊರಲು ಸಾಧ್ಯವಿಲ್ಲ. ಸಾಮರ್ಥ್ಯಕ್ಕೆ ತಕ್ಕಂತೆ ಅಂಬಾರಿ ಹೊರುವ ಆನೆಗಳನ್ನು ಕಾಲಕಾಲಕ್ಕೆ ಬದಲಾಯಿಸಬೇಕಾಗುತ್ತದೆ. ಹೀಗಾಗಿ ರಾಜ್ಯದಲ್ಲಿ ಸಿಎಂ ಬದಲಾವಣೆ ಅನಿವಾರ್ಯವೆಂದು ಯೋಗಿಶ್ವರ್ ಹೇಳಿದ್ದಾರೆ.

ಚಿನ್ನದ ಅಂಬಾರಿಯನ್ನು ಆನೆ ಹೊರಬೇಕೇ ಹೊರತು ಅದರ ಮರಿಯಲ್ಲವೆಂದು ಸಿಎಂ ಪುತ್ರ ಬಿ.ವೈ.ವಿಜಯೇಂದ್ರ ವಿರುದ್ಧ ಯೋಗಿಶ್ವರ್ ಕುಟುಕಿದ್ದಾರೆ. ಕರ್ನಾಟಕವು ಆನೆ ಮತ್ತು ಹುಲಿಗಳಿಗೆ ಪ್ರಖ್ಯಾತಿ ಗಳಿಸಿದೆ. ಚಿನ್ನದ ಅಂಬಾರಿ ಹೊರಲು ಸೂಕ್ತವಾದ ಆನೆಯನ್ನು ಹುಡುಕುವುದು ಕಷ್ಟವೇನಲ್ಲ. ದಸರಾ ಹಬ್ಬ ಬಂದರೆ ಚಿನ್ನದ ಅಂಬಾರಿ ಹೊರಲು ಪಕ್ಷದ ಹೈಕಮಾಂಡ್ ಸೂಕ್ತವಾದ ಆನೆಯನ್ನು ಹುಡುಕಲಿದೆ ಎಂದು ಯೋಗಿಶ್ವರ್ ಹೇಳಿದ್ದಾರೆ.

ಕರ್ನಾಟಕ ಸರ್ಕಾರವೇ ಭ್ರಷ್ಟಾಚಾರದಲ್ಲಿ ಮುಳುಗಿದೆ. ಕೋವಿಡ್–19 ನಿಭಾಯಿಸುವಲ್ಲಿ ವಿಫಲವಾಗಿರುವ ರಾಜ್ಯ ಸರ್ಕಾರ ಕೊರೊನಾ ಹೆಸರಿನಲ್ಲಿಯೂ ಲೂಟಿ ಹೊಡೆದಿದೆ. ಹೀಗಾಗಿ ಯಡಿಯೂರಪ್ಪರನ್ನು ಸಿಎಂ ಸ್ಥಾನದಿಂದ ಬದಲಾಯಿಸಿ ಕರ್ನಾಟಕದಲ್ಲಿ ಬಿಜೆಪಿಯನ್ನು ಉಳಿಸಬೇಕಾಗಿದೆ. ಪಕ್ಷದ ಹೈಕಮಾಂಡ್ ರಾಜ್ಯ ಸರ್ಕಾರದ ಪ್ರತಿಯೊಂದು ನಡೆಯನ್ನು ಗಮನಿಸುತ್ತಿದೆ. ಶೀಘ್ರವೇ ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಯಾಗಲಿದೆ ಎಂದು ಭವಿಷ್ಯ ನುಡಿದಿದ್ದಾರೆ.




## ರೋಟರಿಯಿಂದ ಪ್ರಾಥಮಿಕ ಪಾಠಶಾಲೆಗೆ ಕುಡಿಯುವ ನೀರಿನ ಯಂತ್ರ ವಿತರಣೆ

ಮದ್ದೂರು : ತಾಲೂಕಿನ ಮಾದನಾಯಕನಹಳ್ಳಿ ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಪಾಠಶಾಲೆಗೆ ಬೆಂಗಳೂರಿನ ಚಂದ್ರ ಲೇಔಟ್ ರೋಟರಿ ಸಂಸ್ಥೆ ವತಿಯಿಂದ ಶಾಲಾ ಮಕ್ಕಳಿಗೆ 100 ಲೀಟರ್ ಸಾಮಾರ್ಥ್ಯ ಶುದ್ಧ ಕುಡಿಯುವ ನೀರಿನ ಯಂತ್ರ ವಿತರಿಸಲಾಯಿತು.

ರೋಟರಿ ಸಂಸ್ಥೆಯ ಜಿಲ್ಲಾ ಸಮುದಾಯ ಸೇವೆಗಳ ಮುಖ್ಯಸ್ಥ ಸಿ.ಬಾಲಾಜಿ ಮಾತನಾಡಿ. ಶಾಲಾ ಮಕ್ಕಳಿಗೆ ಶುದ್ಧ ಕುಡಿಯುವ ನೀರು ಅತ್ಯವಶ್ಯಕವಾಗಿದ್ದು, ಶುದ್ಧ ನೀರನ್ನು ಕುಡಿಯುವುದರಿಂದ ಬಹುತೇಕ ಆರೋಗ್ಯ ಸಮಸ್ಯೆಗಳು ದೂರವಾಗುತ್ತದೆ. ಈ ಹಿನ್ನೆಲೆಯಲ್ಲಿ ಸರ್ಕಾರಿ ಶಾಲೆಗಳಿಗೆ ಅನುಕೂಲವಾಗಲಿ ಎಂಬ ಉದ್ದೇಶದಿಂದ ಸಂಸ್ಥೆಯ ವತಿಯಿಂದ ಕುಡಿಯುವ ನೀರಿನ ಯಂತ್ರ ನೀಡಲಾಗುತ್ತಿದೆ ಎಂದು ತಿಳಿಸಿದರು. ಚಂದ್ರ ಲೇ ಔಟ್‌ನ ರೋಟರಿ ಅಧ್ಯಕ್ಷ ಸತೀಶ್, ರೋಟರಿ ಇಂಟರ್ ನ್ಯಾಷಿನಲ್ ಮುಖ್ಯಸ್ಥ ಪಿ.ಜಯಕುಮಾರ್ ಪದಾಧಿಕಾರಿಗಳಾದ ನಿರಂಜನ್, ಪಿ.ಎಸ್. ಬಾಲಾಜಿ, ಸತೀಶ್, ಸೇರಿದಂತೆ ಇತರರಿದ್ದರು.

## ಹರವೆ ಗ್ರಾಮದಲ್ಲಿ ಬೆಳೆ ಸಮೀಕ್ಷೆ ಜಾಗೃತಿ

ಚಾಮರಾಜನಗರ : ತಾಲ್ಲೂಕಿನ ಹರವೆ ಗ್ರಾಮದಲ್ಲಿ ಇಂದು ಬೆಳೆ ಸಮೀಕ್ಷೆ ಬಗ್ಗೆ ರೈತರಿಗೆ ಜಾಗೃತಿ ಮೂಡಿಸಿ ಬೆಳೆ ತಂತ್ರಾಂಶದಲ್ಲಿ ಬೆಳೆ ವಿವರ ಅಪ್ ಲೋಡ್ ಮಾಡುವ ಕುರಿತು ಜಾಗೃತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಹರವೆ ವೃತ್ತದ ಗ್ರಾಮ ಲೆಕ್ಕಿಗ ಕೆ.ಶ್ರೀಧರ್ ಅವರು ಸರ್ಕಾರ ರೈತರ ಅನುಕೂಲಕ್ಕಾಗಿ ನಿಗದಿಪಡಿಸಿರುವ ರೈತ ಬೆಳೆ ತಂತ್ರಾಂಶ ಆಪ್ ನಲ್ಲಿ ರೈತರೇ ಸ್ವತಃ ಬೆಳೆಗಳ ವಿವರ ದಾಖಲಿಸಲು ಜುಲೈ 16 ಕೊನೆಯ ದಿನಾಂಕವಾಗಿದೆ. ಜುಲೈ 16 ರ ನಂತರ ಖಾಸಗಿ ನಿವಾಸಿಗಳು ಸಹ ಬೆಳೆ ಸಮೀಕ್ಷೆ ನಡೆಸಲಿದ್ದಾರೆ. ರೈತರೇ ಖುದ್ದು ತಂತ್ರಾಂಶದ ಮೂಲಕ ಬೆಳೆ ವಿವರ ಅಪ್ ಲೋಡ್ ಮಾಡಲು ಕಾಳಜಿ ವಹಿಸಬೇಕೆಂದು ತಿಳಿಸಿದರು.

ನಂತರ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಧ್ವನಿವರ್ಧಕದ ಸಹಾಯದಿಂದ ಅರಿವು ಮೂಡಿಸಿದರು.

ಈ ಸಂದರ್ಭದಲ್ಲಿ ಗ್ರಾಮ ಸಹಾಯಕ ಮಹೇಶ್ ಇದ್ದರು.



# ನಾನೊಬ್ಬ ರೈತನ ಮಗಳು, ರೈತರ ಕಲ್ಯಾಣಕ್ಕಾಗಿ ದುಡಿಯುವೆ : ನೂತನ ಸಚಿವೆ ಶೋಭಾ ಕರಂದ್ಲಾಜೆ



ನವದೆಹಲಿ, : ಪ್ರಧಾನಮಂತ್ರಿ ನರೇಂದ್ರ ಮೋದಿಯವರು ರೈತರ ಪರ ಕೆಲಸ ಮಾಡುವ ಜವಾಬ್ದಾರಿಯನ್ನು ನನಗೆ ನೀಡಿದ್ದು, ನಾನು ರೈತರ ಕಲ್ಯಾಣಕ್ಕಾಗಿ ಕೆಲಸ ಮಾಡುತ್ತೇನೆ ಎಂದು ನೂತನ ಕೃಷಿ ಮತ್ತು ರೈತರ ಅಭಿವೃದ್ಧಿ ಖಾತೆ ಸಚಿವೆ ಶೋಭಾ ಕರಂದ್ಲಾಜೆ ಹೇಳಿದ್ದಾರೆ.

ಈ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, "ನನಗೆ ರೈತರ ಪರವಾಗಿ ಕೆಲಸ ಮಾಡುವ ಜವಾಬ್ದಾರಿಯನ್ನು ನೀಡಿದ್ದು, ನಾನು ರೈತರ ಕಲ್ಯಾಣಕ್ಕಾಗಿ ಶ್ರಮಿಸಿ ಸರ್ಕಾರದ ಲಾಭಗಳು, ಯೋಜನೆಗಳು ರೈತರಿಗೆ ತಲುಪುವಂತೆ ಮಾಡುತ್ತೇನೆ" ಎಂದಿದ್ದಾರೆ.

ಇನ್ನು "ನಾನೊಬ್ಬ ರೈತನ ಮಗಳು ಹಾಗಾಗಿ ನನಗೆ ರೈತರ ನೋವು ನನಗೆ ತಿಳಿದಿದೆ. ರೈತರ ಕಲ್ಯಾಣಕ್ಕಾಗಿ ದುಡಿಯುತ್ತೇನೆ" ಎಂದಿದ್ದಾರೆ.

ರೈತರ ಪ್ರತಿಭಟನೆಯ ಕುರಿತು ಪ್ರತಿಕ್ರಿಯಿಸಿದ ಅವರು, "ಕೇಂದ್ರ ಸರ್ಕಾರ ಜಾರಿಗೊಳಿಸಿರುವ ಕೃಷಿ ಮಸೂದೆಯನ್ನು ವಿರೋಧಿಸಿ ರೈತರು ಪ್ರತಿಭಟಿಸುತ್ತಿದ್ದು ಅವರೊಂದಿಗೆ ಸರ್ಕಾರ ಮಾತುಕತೆ ನಡೆಸಿದ್ದು, ಈಗಲೂ ಮಾತನಾಡಲು ಸಿದ್ಧವಿದ್ದು, ಸರ್ಕಾರ ರೈತರೊಂದಿಗಿದೆ ಎಂಬುದನ್ನು ನಾವು ದೇಶಕ್ಕೆ ತಿಳಿಸಬೇಕಿದೆ" ಎಂದು ಹೇಳಿದ್ದಾರೆ.

ಇನ್ನು ಬುಧವಾರ ಸಂಜೆಯಷ್ಟೇ ಮಂತ್ರಿಯಾಗಿ ಶೋಭಾ ಕರಂದ್ಲಾಜೆ ಪ್ರಮಾಣವಚನ ಸ್ವೀಕರಿಸಿದ್ದು, ಉಡುಪಿ – ಚಿಕ್ಕಮಗಳೂರು ಸಂಸದೆ ಶೋಭಾಗೆ ಇದೀಗ ಕೃಷಿ, ರೈತರ ಕಲ್ಯಾಣ ರಾಜ್ಯ ಖಾತೆ ಸಚಿವೆ ಹುದ್ದೆ ನೀಡಲಾಗಿದೆ.


ಪುಟ–3

ಕ್ರಾಂತಿಯ ಕಿಡಿ

ಶುಕ್ರವಾರ

09 ಜುಲೈ 2021

ಕಾಯಕಯೋಗಿ

KAYAKAYOGI-MORNING DAILY

ಕನ್ನಡ ದಿನಪತ್ರಿಕೆ


## ಮನ್‌ಮುಲ್ ಬಹುಕೋಟಿ ಹಗರಣ : ಸಿಬಿಐಗೆ ವಹಿಸಲು ಆಗ್ರಹ

# ರೈತಸಂಘದಿಂದ 13ಕ್ಕೆ ಮನ್‌ಮುಲ್ ಮುಂದೆ ಬೃಹತ್ ಪ್ರತಿಭಟನೆ

ಮದ್ದೂರು : ಜಿಲ್ಲಾ ಹಾಲು ಒಕ್ಕೂಟದಲ್ಲಿ ನಡೆದಿರುವ ಹಾಲಿಗೆ ನೀರು ಮಿಶ್ರಿತ ಹಗರಣವನ್ನು ಸಿಬಿಐ ತನಿಖೆಗೆ ಒಪ್ಪಿಸುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಗೆಜ್ಜಲಗೆರೆಯ ಜಿಲ್ಲಾ ಒಕ್ಕೂಟದ ಎದುರು ಜು.13 ರಂದು ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ರಾಜ್ಯ ರೈತ ಸಂಘದ ಜಿಲ್ಲಾಧ್ಯಕ್ಷ ಕೆಂಪೂಗೌಡ ಗುರುವಾರ ಹೇಳಿದರು.

ಪಟ್ಟಣದ ಪ್ರವಾಸಿ ಮಂದಿರದ ಆವರಣದಲ್ಲಿ ತಾಲೂಕು ಘಟಕದ ಅಧ್ಯಕ್ಷ ಆರ್.ಎಸ್.ಸೀತಾರಾಮು ಅಧ್ಯಕ್ಷತೆಯಲ್ಲಿ ನಡೆದ ಹೋರಾಟ ಕುರಿತ ರೈತ ಸಂಘದ ಕಾರ್ಯಕರ್ತರ ಪೂರ್ವಭಾವಿ ಸಭೆ ಉದ್ದೇಶಿಸಿ ಮಾತನಾಡಿದ ಅವರು, ರಾಜ್ಯ ರೈತ ಸಂಘ ಹಾಗೂ ಜಿಲ್ಲಾ ಹಾಲು ಉತ್ಪಾದಕರ ಹೋರಾಟ ಸಮಿತಿ ನೇತೃತ್ವದಲ್ಲಿ ಹಾಲು ಒಕ್ಕೂಟದ ಎದುರು ನಡೆಯುವ ಧರಣಿ ಸತ್ಯಾಗ್ರಹದಲ್ಲಿ ಜಿಲ್ಲೆಯ ಸುಮಾರು 2 ಸಾವಿರ ಮಂದಿ ರೈತ ಕಾರ್ಯ ಕರ್ತರು ಹಾಗೂ ಹಾಲು ಉತ್ಪಾದಕರು ಭಾಗವ ಹಿಸುವ ಮೂಲಕ ಹೋರಾಟ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಮಂಡ್ಯ ಜಿಲ್ಲಾ ಹಾಲು ಒಕ್ಕೂಟ ರೈತ ಮಹಿಳೆಯರ ಆದಾಯದ ಮೂಲವಾಗಿದೆ. ಲಕ್ಷಾಂತರ ಹಾಲು ಉತ್ಪಾದಕರು ಮತ್ತು ರೈತರ ಹಾಗೂ ಹಿರಿಯರ ಶ್ರಮದ ಫಲವಾಗಿ ಒಕ್ಕೂಟದ ಬೃಹತ್ ಸಂಸ್ಥೆಯಾಗಿ ಬೆಳೆದು ನಿಂತಿದೆ. ಕೆಲವು ರಾಜಕೀಯ ಪುಡಾರಿಗಳು ಹಾಗೂ ದಲ್ಲಾಳಿಗಳು ಸೇರಿಕೊಂಡು ಒಕ್ಕೂಟದಲ್ಲಿ ಭಾರಿ ಪ್ರಮಾಣದಲ್ಲಿ ಹಾಲಿಗೆ ನೀರು ಮಿಶ್ರಿತ ಅವ್ಯವಹಾರ ಹಾಗೂ ಮೆಗಾ ಡೇರಿ ನಿರ್ಮಾಣ ಸೇರಿದಂತೆ ಅನೇಕ ಅವ್ಯವಹಾರಗಳು ನಡೆದು, ಒಕ್ಕೂಟ ಆರ್ಥಿಕ ನಷ್ಟ ಹಾದಿಯಲ್ಲಿ ಸಾಗುತ್ತಿದೆ ಎಂದು ಗಂಭೀರ ಆರೋಪ ಮಾಡಿದರು.

ಒಕ್ಕೂಟದಲಿ ನಡೆಯುತ್ತಿರುವ ಹಗರಣಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ರೈತ ಸಂಘ ಹಗೂ ಜಿಲ್ಲಾ ಹಾಲು ಉತ್ಪಾದಕರ ಹೋರಾಟ ಸಮಿತಿ ಹೋರಾಟಕ್ಕೆ ಮುಂದಾಗಿದೆ ಎಂದರು. ರೈತ ಸಂಘದ ಮುಖಂಡರಾದ ಕೀಳಘಟ್ಟ ನಂಜುಂಡಯ್ಯ, ಲಿಂಗಾಪ್ಪಾಜಿ, ರವಿಕುಮಾರ್, ವರದಪ್ಪ, ಜಿ.ಎ.ಶಂಕರ್, ಪುಟ್ಟಸ್ವಾಮಿ, ಮರಿಸ್ವಾಮಿ, ವೆಂಕಟೇಶ್, ರವಿ, ಶಂಕರೇಗೌಡ, ಕುಮಾರ್ ಇದ್ದರು.



**ಸಭೆಯಲ್ಲಿ ರೈತ ಮುಖಂಡ ಕೀಳಘಟ್ಟ ನಂಜುಂಡಯ್ಯ ಮಾತನಾಡಿದರು. ಕೆಂಪೂಗೌಡ, ಸೀತರಾಮು, ಲಿಂಗಾಪ್ಪಾಜಿ, ರವಿಕುಮಾರ್, ವರದಪ್ಪ, ಜಿ.ಎ.ಶಂಕರ್ ಇದ್ದರು.**

## ಹಾಲಿಗೆ ನೀರು ಪ್ರಕರಣದಲ್ಲಿ ತಪ್ಪಿತಸ್ಥರಿಗೆ ಶಿಕ್ಷೆಯಾಗಲಿದೆ ಮನ್ ಮುಲ್ ನಿರ್ದೇಶಕಿ ಎಂ.ರೂಪ

ಮದ್ದೂರು : ತಾಲೂಕಿನ ಗೆಜ್ಜಲಗೆರೆಯ ಜಿಲ್ಲಾ ಹಾಲು ಒಕ್ಕೂಟದ ಹಾಲಿಗೆ ನೀರು ಬೆರೆಸುವ ಹಗರಣವನ್ನು ಭೇದಿಸುವಲ್ಲಿ ಆಡಳಿತ ಮಂಡಳಿ ಯಶಸ್ವಿಯಾಗಿದೆ. ತಪಿತಸ್ಥರಿಗೆ ಶಿಕ್ಷೆಯಾಗುತ್ತದೆ ಎಂದು ಮನ್‌ಮುಲ್ ನಿರ್ದೇಶಕಿ ಎಂ.ರೂಪ ಹೇಳಿದರು.

ತಾಲೂಕಿನ ಪಣ್ಣೆದೊಡ್ಡಿ ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಅಭಿನಂದನೆ ಸ್ವೀಕರಿಸಿ ಮಾತನಾಡಿದರು.

ಮನ್ ಮುಲ್ ನಿಂದ ರೈತರಿಗೆ ಅನ್ಯಾಯವಾಗಲು ನಾವು ಬಿಡುವುದಿಲ್ಲ. ಹಾಲು ನೀರಿನ ಪ್ರಕರಣದ ತನಿಖೆಯನ್ನು ಸರ್ಕಾರ ಸಿಐಡಿಗೆ ವಹಿಸಿದೆ ಅದನ್ನು ಸ್ವಾಗತಿಸುತ್ತೇನೆ ಎಂದರು.

ನಮ್ಮ ಆಡಳಿತ ಮಂಡಳಿ ಸರ್ಕಾರದ ನೇಮಿಸುವ ಯಾವುದೇ ತನಿಖೆಗೆ ಸಿದ್ದವಿದೆ. ಕೆಲವರು ಮನ್ ಮುಲ್ ಹಾಲು ನೀರಿನ ಪ್ರಕರಣವನ್ನು ರಾಜಕೀಯ ದುರುದ್ದೇಶಕ್ಕೆ ಬಳಸಿಕೊಳ್ಳುತ್ತಿರುವುದು ಸರಿಯಲ್ಲ. ಪಾರದರ್ಶಕವಾಗಿ ತನಿಖೆ ನಡೆದು ತಪ್ಪಿತಸ್ಥರಿಗೆ ಶಿಕ್ಷೆಯಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಮನ್ ಮುಲ್ ಉಪ ವ್ಯವಸ್ಥಾಪಕ ಉಮಾಶಂಕರ್, ಪಣ್ಣೆದೊಡ್ಡಿ ಎಂಪಿಸಿಎಸ್ ಅಧ್ಯಕ್ಷ ಪಿ.ಟಿ. ವೇಣುಗೋಪಾಲ್, ಉಪಾಧ್ಯಕ್ಷ ನಿಂಗಯ್ಯ, ಗ್ರಾ.ಪಂ. ಸದಸ್ಯರಾದ ಶೋಭ ಪುಟ್ಟಸ್ವಾಮಿ, ಚನ್ನಕೇಶವ, ಎಂಪಿಸಿಎಸ್ ನಿರ್ದೇಶಕರಾದ ಶಿವಾನಂದಸ್ವಾಮಿ, ಸನತ್ ಕುಮಾರ್, ತಿಮ್ಮೇಶ್, ರೇಣುಕಮ್ಮ ಸುಜಾತ, ಶೇಖರ್, ಜಯಲಕ್ಷ್ಮಮ್ಮ, ಅಪ್ಪಾಜಿ, ನಾರಾಯಣ, ಕಾರ್ಯದರ್ಶಿ ಟಿ. ನಂದೀಶ ಇತರರಿದ್ದರು.



**ಮದ್ದೂರು ತಾಲೂಕು ಪಣ್ಣೆದೊಡ್ಡಿ ಗ್ರಾಮದ ಎಂಪಿಸಿಎಸ್ ಆವರಣದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮನ್ ಮುಲ್ ನಿರ್ದೇಶಕಿ ಎಂ. ರೂಪ ಅವರನ್ನು ಅಭಿನಂದಿಸಲಾಯಿತು. ಉಮಾಶಂಕರ್, ವೇಣುಗೋಪಾಲ್, ನಿಂಗಯ್ಯ, ಶೋಭಾಪುಟ್ಟಸ್ವಾಮಿ, ಚನ್ನಕೇಶವ, ಸನತ್‌ಕುಮಾರ್ ಇದ್ದರು.**

## ಅಪರಿಚಿತ ಶವ ಪತ್ತೆಗಾಗಿ


ಮಂಡ್ಯ : ಮತ್ತೀಕೆರೆ ಗ್ರಾಮದ ನಿವಾಸಿ ನಾಗೇಗೌಡರವರ ಹೊಸ ಮನೆಯ ಗಾರೆ ಕೆಲಸಕ್ಕೆ ಸೇರಿಕೊಂಡಿದ್ದ 45ವರ್ಷದ ಕರಿಯಪ್ಪ ಎಂಬುವವರು ಜುಲೈ 2 ರಂದು ಬೆಳಗ್ಗೆ ಸುಮಾರು 4.30 ರ ಸಮಯದಲ್ಲಿ ಹೊಸಾರಿನ ಕಲ್ನಾರ್ ಶೀಟಿನ ಕಂಬಿಗೆ ಹಗ್ಗದಿಂದ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಶವಪತ್ತೆಯಾಗಿದೆ ಎಂದು ಕೆ.ಆರ್ ಪೇಟೆ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮೃತ ವ್ಯಕ್ತಿಯು 157 ಸೆ.ಮೀ ಎತ್ತರವಿದ್ದು, ಅರೆಬೊಕ್ಕ ತಲೆ ಹೊಂದಿದ್ದಾರೆ. ಎಣ್ಣೆಗೆಂಪು ಮೈಬಣ್ಣ, ಕೋಲುಮುಖ ಹಾಗೂ ಸಾಧಾರಣ ಮೈಕಟ್ಟನ್ನು ಹೊಂದಿದ್ದು, ಮೃತನ ಬಲಗೈ ಮೇಲೆ ಒಅ ಎಂದು ಎಡಗೈ ಮೇಲೆ ಮಜವ ಎಂಬ ಹೆಸರಿನ ಹಚ್ಚೆ ಇರುತ್ತದೆ ಹಾಗೂ ಬಲಕಿಬ್ಬೊಟ್ಟೆ ಮೇಲೆ ಅಫೆಂಡಿಸ್ ಐಟಿಸ್ ಆಪರೇಷನ್ ಆಗಿರುವ ಗುರುತು ಇದ್ದು ಎದೆಯ ಮೇಲೆ ಕಪ್ಪು ಮಚ್ಚೆ ಇರುತ್ತದೆ.

ಮೃತವ್ಯಕ್ತಿಯ ಮೈಮೇಲೆ ತುಂಬುತೋಳಿನ ಶರ್ಟು, ನೀಲಿ ಬನಿಯನ್ ಇರುತ್ತದೆ. ಕನ್ನಡ ಮತ್ತು ತಮಿಳು ಭಾಷೆ ಮಾತನಾಡುತ್ತಾರೆ.

ಈ ಸ್ವಂತ ಊರು ಹಾಗೂ ಕುಟುಂಬದವರ ಮಾಹಿತಿಯಿಲ್ಲದ ಕಾರಣ ಇವರ ಸುಳಿವು ಸಿಕ್ಕವರು ಕೆ.ಆರ್ ಪೇಟೆ ಗ್ರಾಮಂತರ ಪೊಲೀಸ್ ಠಾಣೆ ದೂ.ಸಂ:08232–262440 ಸಂಪರ್ಕಿಸಬಹುದೆಂದು ಕೆ.ಆರ್ ಪೇಟೆ ಗ್ರಾಮಂತರ ಪೊಲೀಸ್ ಠಾಣೆಯ ಸಬ್‌ಇನ್ಸ್‌ಪೆಕ್ಟರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯಾರ್ಥಿ ವೇತನಕ್ಕೆ ಆಯ್ಕೆ; ಬಿಇಓ ಮೆಚ್ಚುಗೆ



ಮದ್ದೂರು: ತಾಲೂಕಿನ ಚಿಕ್ಕಂನಹಳ್ಳಿ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರೌಢಶಾಲಾ ವಿಭಾಗದ ಕುಮಾರಿ ಸಾರಿಕಾ ಮತ್ತು ಕುಮಾರಿ ಕುಸುಮಾಂಜಲಿ ಇಬ್ಬರು ವಿದ್ಯಾರ್ಥಿಗಳು 2020–21 ನೇ ಸಾಲಿನ ರಾಷ್ಟ್ರೀಯ ಪ್ರತಿಭಾನ್ವೇಷಣಾ ವಿದ್ಯಾರ್ಥಿ ವೇತನ ಪರೀಕ್ಷೆಯಲ್ಲಿ ಉತ್ತೀರ್ಣರಾಗುವ ಮೂಲಕ ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾಗಿ ಶಾಲೆಗೆ ಮತ್ತು ತಾಲೂಕಿಗೆ ಕೀರ್ತಿ ತಂದಿದ್ದಾರೆಂದು ಬಿಇಓ ಮಹಾದೇವ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

## ಸುಮಲತಾ ರಾಜಕೀಯ ಅನಾನುಭವಿ ನಿಖಿಲ್ ಕುಮಾರಸ್ವಾಮಿ ವಾಗ್ದಾಳಿ

ಕೋಲಾರ: 'ಸಂಸದೆ ಸುಮಲತಾ ಅವರಿಗೆ ರಾಜಕೀಯವಾಗಿ ಅನುಭವದ ಕೊರತೆಯಿದೆ. ಅವರು ವೈಯಕ್ತಿಕ ಲಾಭಕ್ಕೆ ಟೀಕಿಸುವುದನ್ನು ಬಿಟ್ಟು ಮೊದಲು ಮಂಡ್ಯ ಜನರ ಋಣ ತೀರಿಸಲಿ' ಎಂದು ಜೆಡಿಎಸ್ ರಾಜ್ಯ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ತೀವ್ರ ವಾಗ್ದಾಳಿ ನಡೆಸಿದ್ದಾರೆ.



ತಾಲ್ಲೂಕಿನ ಕೊಂಡರಾಜನಹಳ್ಳಿಯಲ್ಲಿ ಗುರುವಾರ ಸುದ್ದಿಗಾರರೊಂದಿಗೆ ಮಾತನಾಡಿ, 'ಕೆಆರ್‌ಎಸ್ ಜಲಾಶಯಕ್ಕೆ ಭವ್ಯ ಇತಿಹಾಸವಿದೆ. ರಾಜ ಮಹಾರಾಜರು ಒಡವೆ ಅಡವಿಟ್ಟು ಡ್ಯಾಂ ಕಟ್ಟಿಸಿದ್ದಾರೆ. ಮಾಧ್ಯಮದ ಮುಂದೆ ಪೋಸು ಕೊಡುವ ಉದ್ದೇಶಕ್ಕೆಮಂಡ್ಯ ಜನರಲ್ಲಿ ಆತಂಕ ಸೃಷ್ಟಿಸಬೇಡಿ' ಎಂದು ವ್ಯಂಗ್ಯವಾಡಿದರು.

'ಕೆಆರ್‌ಎಸ್ ಜಲಾಶಯ ಬಿರುಕು ಬಿಟ್ಟಿದ್ದರೆ ಆ ಬಗ್ಗೆ ತಾಂತ್ರಿಕ ಸಮಿತಿ ಅಥವಾ ಸರ್ಕಾರ ಉತ್ತರ ಕೊಡಲಿ. ಆದರೆ, ಸುಮಲತಾ ಅವರು ಕೆಆರ್‌ಎಸ್ ಡ್ಯಾಂ ಬಿರುಕು ಬಿಟ್ಟಿದೆ ಎಂದು ಗೊಂದಲ ಸೃಷ್ಟಿಸುವುದು ಸರಿಯಲ್ಲ. ಜಲಾಶಯದ ಸುತ್ತಮುತ್ತ ಅಕ್ರಮ ಗಣಿಗಾರಿಕೆ ನಡೆಸುತ್ತಿರುವವರು ಎಷ್ಟೇ ಪ್ರಭಾವಿಗಳಾದರೂ ಸರ್ಕಾರ ಕ್ರಮ ಕೈಗೊಳ್ಳಲಿ' ಎಂದು ಹೇಳಿದರು.

'ಕುಮಾರಸ್ವಾಮಿ ಹಾಗೂ ದೇವೇಗೌಡರು ರಾಜ್ಯದ ಸಂಪತ್ತು ಉಳಿಸುವ ಕೆಲಸ ಮಾಡಿದ್ದಾರೆ ಎಂಬ ಸತ್ಯ ಜನರಿಗೆ ಗೊತ್ತಿದೆ. ಸುಮಲತಾ ಅವರು ಮಾಹಿತಿ ಪಡೆದು ಬೇರೆಯವರ ಬಗ್ಗೆ ಮಾತನಾಡಬೇಕು. ಮಾಧ್ಯಮದಲ್ಲಿ ಫೋಕಸ್ ಆಗಬೇಕೆಂಬ ಉದ್ದೇಶಕ್ಕೆ ಸುಳ್ಳು ಆರೋಪ ಮಾಡಬಾರದು' ಎಂದು ಕುಟುಕಿದರು.

'ಸುಮಲತಾ ಅವರು ನನ್ನ ತಮ್ಮ ಪ್ರಜ್ವಲ್ ರೇವಣ್ಣರನ್ನು ಹೊಗಳಿ ಪೊಲಿಟಿಕಲ್ ಸರ್ಟಿಫಿಕೇಟ್ ಕೊಟ್ಟಿದ್ದಾರೆ. ಅವರಿಗೆ ಅಭಿನಂದನೆ. ನಾನು ಮಂಡ್ಯ ಚುನಾವಣಾ ಸೋಲು ಒಪ್ಪಿಕೊಂಡಿದ್ದೇನೆ. ಆದರೆ, ಐದು ಮುಕ್ಕಾಲು ಲಕ್ಷ ಜನ ಮತ ಹಾಕಿದ್ದಾರೆ. ಬೇಜಾರಿಲ್ಲ, ಚುನಾವಣೆಯಲ್ಲಿ ಸೋಲು ಗೆಲುವು ಸಾಮಾನ್ಯ. ಚುನಾವಣೆಯಲ್ಲಿ ಗೆದ್ದಿರುವ ಸುಮಲತಾ ಅವರೇ ವೈಯಕ್ತಿಕ ಟೀಕೆ, ಆರೋಪದಲ್ಲೇ ಕಾಲಹರಣ ಮಾಡಬೇಡಿ' ಎಂದರು.

## ಯಾರಿಂದಲೂ ನಮ್ಮ ಕುಟುಂಬ ಒಡೆಯಲು ಸಾಧ್ಯವಿಲ್ಲ: ಎಚ್.ಡಿ. ರೇವಣ್ಣ

ಹಾಸನ: ಯಾರಿಂದಲೂ ನಮ್ಮ ಕುಟುಂಬ ಒಡೆಯಲು ಸಾಧ್ಯವಿಲ್ಲ. ಪ್ರಜ್ವಲ್ ರೇವಣ್ಣ ಆಗಲಿ, ದೇವೇಗೌಡರಾಗಲಿ, ಕುವಾರಸ್ವಾಮಿಯಾಗಲಿ ನಾವೆಲ್ಲರೂ ಒಂದೇ ಕುಟುಂಬ ಸದಸ್ಯರಾಗಿ ಒಟ್ಟಿಗಿದ್ದೇವೆ. ಮಂಡ್ಯ ಸಂಸದೆ ಸುಮಲತಾ ಅವರು ನೀಡಿರುವ ಹೇಳಿಕೆಗೆ ನಾನು ಪ್ರತಿಕ್ರಿಯೆ ನೀಡಲು ಹೋಗುವುದಿಲ್ಲ, ನಮ್ಮ ಕುಟುಂಬವನ್ನು ಒಡೆಯುವ ಹೇಳಿಕೆಯನ್ನೂ ನಾನು ನೀಡುವುದಿಲ್ಲ ಎಂದು ಜೆಡಿಎಸ್ ನಾಯಕ ಎಚ್.ಡಿ. ರೇವಣ್ಣ ಪ್ರತಿಕ್ರಿಯಿಸಿದ್ದಾರೆ.



ನಗರದಲ್ಲಿ ಮಾತನಾಡುತ್ತಿದ್ದ ವೇಳೆ, ಕುಮಾರಸ್ವಾಮಿಯವರು ಪ್ರಜ್ವಲ್ ರೇವಣ್ಣರನ್ನು ನೋಡಿ ಸಂಸ್ಕೃತಿ ಕಲಿಯಲಿ ಎಂದು ನೀಡಿರುವ ಹೇಳಿಕೆಗೆ ನೀವೇನನ್ನುತ್ತೀರಿ ಎಂದು ಸುದ್ದಿಗಾರರು ಕೇಳಿದಾಗ, ಥೂ..ಥೂ.. ಅದಕ್ಕೆಲ್ಲ ನಾನು ರಿಯಾಕ್ಟ್ ಮಾಡೋಕೆ ಹೋಗಲ್ಲ, ನಮ್ಮ ಕುಟುಂಬವನ್ನು ಯಾರಿಂದಲೂ ಒಡೆಯಲು ಸಾಧ್ಯವಿಲ್ಲ, ನಾವು ಯಾರ ಬಗ್ಗೆಯೂ ಹಗುರವಾಗಿ ಮಾತನಾಡುವುದಿಲ್ಲ. ಅವರಿಗೆ ಭಗವಂತ ಒಳ್ಳೆಯದು ಮಾಡಲಿ, ನನ್ನ ಮಗನ ಹೆಸರು ಅವರು ಏಕೆ ಪ್ರಸ್ತಾಪಿಸಿದರು ಎಂದು ಕೇಳಿದರು.

ಕಳೆದ ಎಂಪಿ ಚುನಾವಣೆಯಲ್ಲಿ ಬಿಜೆಪಿ ನಾಯಕರು, ಮುಖ್ಯಮಂತ್ರಿ ಯಡಿಯೂರಪ್ಪನವರು ಸುಮಲತಾ ಅವರಿಗೆ ಸಹಾಯ ಮಾಡಿದ್ದಾರೆ, ಈಗಲೂ ಮಂಡ್ಯ ಜಿಲ್ಲೆಯ ಜನರ ಒಳಿತಿಗೆ ಸರ್ಕಾರದಿಂದ ಸಹಾಯ, ಅನುದಾನ ತರಿಸಿಕೊಳ್ಳಲಿ, ಕೆಲಸ ಮಾಡಿ ತೋರಿಸಲಿ, ಕುಮಾರಸ್ವಾಮಿಯವರು ದ್ವೇಷದ ರಾಜಕಾರಣ ಮಾಡುವುದಿಲ್ಲ, ಅಂಬರೀಷ್ ಅವರ ಬಗ್ಗೆ ನಮಗೆ ಗೌರವ ಇದೆ, ಅದನ್ನು ಸುಮಲತಾ ಅವರು ಉಳಿಸಿಕೊಳ್ಳಲಿ ಎಂದರು.

# ಸರ್ಕಾರಿ ಹುದ್ದೆಯಿಂದ 121 ಜಾತಿಗಳು ವಂಚಿತ: ಕೆ.ಎನ್.ಲಿಂಗಪ್ಪ

## 'ಹಿಂದುಳಿದ ವರ್ಗಗಳ ಮೀಸಲಾತಿ ಮತ್ತು ರಾಜಕಾರಣ' ಕುರಿತು ವಿಶೇಷ ಉಪನ್ಯಾಸ

ಮೈಸೂರು: ಇದುವರೆಗೂ 121 ಜಾತಿಗಳು ಒಂದೇ ಒಂದು ಸರ್ಕಾರಿ ಹುದ್ದೆ ಪಡೆಯಲು ಸಾಧ್ಯವಾಗಿಲ್ಲ. ಇದು ಯಾವ ರೀತಿಯ ಸಾಮಾಜಿಕ ನ್ಯಾಯ ಎಂದು ಮೈಸೂರು ವಿಶ್ವವಿದ್ಯಾನಿಲಯದ ಡಿ.ದೇವರಾಜ ಅರಸು ಪೀಠದ ಸಂದರ್ಶಕ ಪ್ರಾಧ್ಯಾಪಕ ಕೆ.ಎನ್. ಲಿಂಗಪ್ಪ ಪ್ರಶ್ನಿಸಿದ್ದಾರೆ.

ಮೈಸೂರು ವಿಶ್ವವಿದ್ಯಾನಿಲಯದ ಡಾ.ಬಿ.ಆರ್.ಅಂಬೇಡ್ಕರ್ ಸಂಶೋಧನ ಮತ್ತು ವಿಸ್ತರಣಾ ಕೇಂದ್ರದ ವತಿಯಿಂದ ಗುರುವಾರ ಜರುಗಿದ ವೆಬಿನಾರ್‌ನಲ್ಲಿ 'ಹಿಂದುಳಿದ ವರ್ಗಗಳ ಮೀಸಲಾತಿ ಮತ್ತು ರಾಜಕಾರಣ' ಕುರಿತು ವಿಶೇಷ ಉಪನ್ಯಾಸ ನೀಡಿದರು.

ಈಗ ಶೇ. 95ರಷ್ಟು ಸಮುದಾಯಗ ಳನ್ನು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳೆಂದು ಗುರುತಿಸಲಾಗಿದೆ. ಕೆಲವೇ ಕೆಲ ಬೆರಳೆಣಿಕೆಯಷ್ಟು ಸಮುದಾಯಗಳು ಮಾತ್ರವೇ ಮೀಸಲಾತಿ ಯಿಂದ ದೂರ ಉಳಿದಿವೆ. ಅರ್ಹತೆ ಇಲ್ಲದ ಸಮುದಾಯಗಳು ಮೀಸಲಾತಿಯ ಬಹುಪಾಲನ್ನು ಕಬಳಿಸು ತ್ತಿವೆ ಎಂದರು.

ಚಿನ್ನಪ್ಪರೆಡ್ಡಿ ವರದಿಯನ್ನು ಯಥಾ ವತ್ತಾಗಿ ಜಾರಿ ಮಾಡದ ಸರ್ಕಾರ, ವರದಿ ಯಲ್ಲಿ ಶಿಫಾರಸ್ಸು ಮಾಡದ ಜಾತಿಗಳನ್ನು ಹಿಂದುಳಿದ ವರ್ಗಗಳ ಪಟ್ಟಿಯಲ್ಲಿ ಸೇರಿಸಿ, 3ಎ, 3ಬಿ ವರ್ಗಗಳನ್ನು ಸೃಷ್ಟಿಸಿತು. ಇದ ರಿಂದ ಒಟ್ಟಾರೆ ಮೀಸಲಾತಿಯ ಪ್ರಮಾಣ ಶೇ 73ಕ್ಕೆ ಹೆಚ್ಚಿತು. ಪ್ರಕರಣ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದಾಗ ಸರ್ಕಾರ ತನ್ನ ನಿಲುವನ್ನು ಸಮರ್ಥಿಸಿಕೊಳ್ಳಲಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ನ್ಯಾಯಾಲಯವು ಅಂತಿಮವಾಗಿ ಶೇ 50ಕ್ಕೆ ಮೀಸಲಾತಿ ಪ್ರಮಾಣ ಮಿತಿಗೊಳಿಸಿ ಎಂದು ತೀರ್ಪು ನೀಡಿದಾಗಲೂ ವರದಿಯಲ್ಲಿ ಶಿಫಾರಸ್ಸು ಮಾಡದ ಜಾತಿಗಳನ್ನು ಪಟ್ಟಿಯಿಂದ ಕೈಬಿಡದ ಸರ್ಕಾರ ಎಲ್ಲ ವನ್ನೂ ಸೇರಿಸಿ ಮೀಸಲಾತಿ ಪ್ರಮಾಣ ವನ್ನು ಕಡಿಮೆಗೊಳಿಸಿತು. ಇದು ವರದಿ ಯಲ್ಲಿ ಶಿಫಾರಸ್ಸು ಮಾಡಿದ ಜಾತಿಗಳಿಗೆ ಘೋರ ಅನ್ಯಾಯ ಮಾಡಿದಂತಾಯಿತು. ಅರ್ಹತೆ ಇಲ್ಲದ ಜಾತಿಗಳನ್ನು ಹಿಂದುಳಿದ ವರ್ಗಗಳ ಪಟ್ಟಿಯಲ್ಲಿ ಸೇರಿಸಿದ ಕುರಿತು ಯಾರೂ ಪ್ರಶ್ನಿಸದೇ ಇರುವುದು ದೊಡ್ಡ ದುರಂತ ಎಂದು ವಿಶ್ಲೇಷಿಸಿದರು.

ಹಿಂದುಳಿದ ವರ್ಗಗಳ ಆಯೋಗ ಗಳು ಹಿಂದುಳಿದ ಜಾತಿಗಳನ್ನು ಸರಿ ಯಾಗಿ ಗುರುತಿಸಿ ವರದಿ ನೀಡಿದರೂ ಸರ್ಕಾರ ಆ ವರದಿಯನ್ನು ಯಥಾವತ್ತಾಗಿ ಜಾರಿಗೊಳಿಸುತ್ತಿಲ್ಲ. ಈ ವರದಿಯನ್ನು ವಿರೂಪಗೊಳಿಸಿ ಜಾರಿಗೊಳಿಸುತ್ತಿರುವುದ ರಿಂದ ನಿಜವಾಗಿ ಹಿಂದುಳಿದಿರುವ ಜಾತಿಗಳಿಗೆ ಅನ್ಯಾಯವಾಗುತ್ತಿದೆ ಎಂದು ಕಿಡಿಕಾರಿದರು.

ಎಲ್ಲ ಪ್ರವರ್ಗಗಳಲ್ಲೂ ಇದುವರೆಗೆ ಅವಕಾಶಗಳನ್ನು ಪಡೆಯದ ಜಾತಿಗಳನ್ನು ಗುರುತಿಸಿ ಅವುಗಳನ್ನೆಲ್ಲ ಸೇರಿಸಿ ಪ್ರತ್ಯೇಕ ಪ್ರವರ್ಗ ಮಾಡಬೇಕು. ಜನಸಂಖ್ಯೆಗೆ ಅನುಗುಣವಾಗಿ ಹಾಗೂ ಖಾಸಗಿ ಕ್ಷೇತ್ರದಲ್ಲಿ ಮೀಸಲಾತಿ ನೀಡಬೇಕು ಎಂದು ಸಲಹೆ ನೀಡಿದರು.






**ಚಾಮರಾಜನಗರದ ನಗರಸಭೆ ಹಿಂಭಾಗ ಪೌರಕಾರ್ಮಿಕರಿಗಾಗಿ ನಿರ್ಮಿಸಲಾಗುತ್ತಿರುವ ವಿಶ್ರಾಂತಿ ಗೃಹಗಳನ್ನು ರಾಜ್ಯ ಸಫಾಯಿ ಕರ್ಮಚಾರಿ ಆಯೋಗದ ಅಧ್ಯಕ್ಷ ಕೋಟೆ ಎಂ.ಶಿವಣ್ಣ ಪರಿಶೀಲಿಸಿದರು. ನಗರಸಭೆ ಪೌರಾಯುಕ್ತ ಕರಿಬಸವಯ್ಯ, ಸಮುದಾಯ ಸಂಘಟನಾಧಿಕಾರಿ ವೆಂಕಟನಾಯ್ಕ, ಆರೋಗ್ಯ ನಿರೀಕ್ಷಕರಾದ ಎಸ್. ಸರವಣ, ಶಿವಪ್ರಸಾದ್, ಮಂಜು, ಮುಖಂಡ ನಟರಾಜು ಇದ್ದರು.**